ವಿಜಯಪುರ | ಸಂಪುಟ 04 | ಸಂಚಿಕೆ 096 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಬುಧವಾರ, ಜೂನ್, 03, 2026



"ಜಮೀರ್ ಅಹ್ಮದಖಾನ್ ಅವರು, ಬಿಜೆಪಿಗೆ ಸಹಾಯ ಮಾಡಲು ಹೀಗೆ ಮಾಡಿದ್ದಾರೆ. ನಮ್ಮವರೇ ನಮ್ಮ ಬೆನ್ನಿಗೆ ಚೂರಿ ಹಾಕುವ ಕೆಲಸ ಮಾಡಬಾರದು. ಜನರ ಆಶೀರ್ವಾದದಿಂದ ನಮ್ಮ ಮಗ ಗೆದ್ದಿದ್ದಾನೆ. ಅವರ ಆಡಿಯೋ ವೈರಲ್ ಬಗ್ಗೆ ಹೈಕಮಾಂಡ್ ಸೂಕ್ತ ನಿರ್ಧಾರ ಕೈಗೊಳ್ಳಬೇಕಿದೆ, ಕೈಗೊಳ್ಳುತ್ತಾರೆ. "

■ ಎಸ್.ಎಸ್. ಮಲ್ಲಿಕಾರ್ಜುನ
ಮಾಜಿ ಸಚಿವರು

## ಮಾದಿಗ ಸಮಾದ ವಿದ್ಯಾರ್ಥಿಗಳಿಗೆ ಪ್ರೇರಣಾ ಕಾರ್ಯಕ್ರಮ



■ ಉದಯರಶ್ಮಿ ದಿನಪತ್ರಿಕೆ

ಎಚ್.ಡಿ.ಕೋಟೆ: ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿರುವ ನಮ್ಮ ದೇಶದಲ್ಲಿ ಶಿಕ್ಷಣಕ್ಕೆ ತನ್ನದೇ ಆದ ಶಕ್ತಿ ಇದೆ. ಇದನ್ನು 15 ರಿಂದ 25 ವರ್ಷದೊಳಗಿನ ವಿದ್ಯಾರ್ಥಿಗಳು ಬಳಸಿಕೊಂಡು ಶಿಕ್ಷಣ ಕಡೆ ಹೆಚ್ಚು ಗಮನ ಕೊಡಬೇಕು. ಆ 10 ವರ್ಷದಲ್ಲಿ ನೀವು ಕಲಿಕೆ ಕೂಡ ಗಮನಕೊಟ್ಟರೆ, ಮುಂದಿನ 60 ವರ್ಷ ನೆಮ್ಮದಿಯ ಜೀವನ ನಡೆಸಬಹುದು, ಸಮಾಜ ಗುರುತಿಸುವ ವ್ಯಕ್ತಿ ನೀವಾಗಬಹುದು ಎಂದು ಅಕ್ಕ ಐಎಎಸ್ ಅಕಾಡೆಮಿಯ ಮುಖ್ಯಸ್ಥರಾದ ಡಾ. ಶಿವಕುಮಾರ್ ಹೇಳಿದರು.

ಪಟ್ಟಣದ ಡಾಕ್ಟರ್ ಬಿ ಆರ್ ಅಂಬೇಡ್ಕರ್ ಭವನದಲ್ಲಿ ಕೋಟೆ ಮತ್ತು ಸರಗೂರು ತಾಲೂಕಿನ ಮಾದರ ಮಹಾಸಭಾ, ಡಾ. ಬಾಬು ಜಗಜೀವನ ರಾಮ್ ವಿಚಾರ ವೇದಿಕೆ ಹಾಗೂ ಮಾತಂಗ ಜನಜಾಗೃತಿ ವೇದಿಕೆಯ ಸಂಯುಕ್ತ ಆಶ್ರಯದಲ್ಲಿ ಆಯೋಜನೆ ಮಾಡಿದ ಎಸ್ ಎಸ್ ಎಲ್ ಸಿ, ಪಿಯುಸಿ, ಪದವಿ ವಿದ್ಯಾರ್ಥಿಗಳು ಹಾಗೂ ಪೋಷಕ–ರಿಗೆ ಪ್ರೇರಣಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಸಮಯ ಎಂಬುದು ಸಂಪತ್ತು ಇದ್ದಂತೆ, ಯಾವುದೇ ಕಾರಣಕ್ಕೂ ವಿದ್ಯಾರ್ಥಿಗಳು ಇದನ್ನು ಹಾಳುಮಾಡಿಕೊಳ್ಳಬಾರದು, ದಿನದ 24 ಗಂಟೆಯಲ್ಲಿ ಆರು ಗಂಟೆಯನ್ನಾದರೂ ಓದುವುದಕ್ಕೆ ಮೀಸಲಿಟ್ಟರೆ ನಿಮ್ಮ ಭವಿಷ್ಯ ಪ್ರಜ್ವಲಿಸಲಿದೆ ಎಂದು ಹೇಳಿದರು.

ಸಮಾಜ ಸೇವಕ ಬೂದನೂರು ವೆಂಕಟೇಶ್ ಮಾತನಾಡಿ, ಸಮಾಜದ ಅಭಿವೃದ್ಧಿಗೆ ಶಿಕ್ಷಣ ಬಹಳ ಮುಖ್ಯ. ಮಕ್ಕಳು ವಿದ್ಯಾವಂತರಾದರಷ್ಟೇ ಆ ಸಮಾಜ, ಆ ಸಮುದಾಯ ಏಳಿಗೆ ಕಾಣಲು ಸಾಧ್ಯ. ಸಮುದಾಯದ ಸಂಘಟನೆಗಳ ವತಿಯಿಂದ ಇಂತಹ ಕಾರ್ಯಕ್ರಮ ಆಯೋಜನೆ ಮಾಡುವ ಮೂಲಕ ಮಕ್ಕಳಿಗೆ ಮಾರ್ಗದರ್ಶನ ನೀಡಿದರೆ ಖಂಡಿತವಾಗಿಯೂ ಮಕ್ಕಳು ಮುಂದೆ ಬರುತ್ತೆ ಬರುತ್ತಾರೆ. ಇದಕ್ಕೆ ಒಗ್ಗಟ್ಟು, ಸಹಕಾರ ಬಹಳ ಮುಖ್ಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಾದರ ಮಹಾಸಭಾದ ಹೆಚ್ ಡಿ ಕೋಟೆ ತಾಲೂಕು ಅಧ್ಯಕ್ಷ ಪರಶಿವಮೂರ್ತಿ, ಸರಗೂರು ತಾಲೂಕು ಮಾದರ ಮಹಾಸಭಾ ಅಧ್ಯಕ್ಷ ಬೆಟ್ಟಸ್ವಾಮಿ, ಡಾ.ಬಾಬು ಜಗಜೀವರಾಂ ವಿಚಾರ ವೇದಿಕೆಯ ಅಧ್ಯಕ್ಷ ಸಿ. ತಿಮ್ಮಯ್ಯ, ಮಾಜಿ ಅಧ್ಯಕ್ಷ ಪಿ ನಾಗರಾಜ್, ಕಾರ್ಯದರ್ಶಿ ಎಡತೊರೆ ಶಿವರಾಜ್, ಮಾದರ ಮಹಾಸಭಾ ಉಪಾಧ್ಯಕ್ಷ ಪ್ರಕಾಶ್, ಖಜಾಂಚಿ ಡಿ.ನಾಗರಾಜ್, ಮಾತಂಗ ಜನ ಜಾಗೃತಿ ವೇದಿಕೆ ಅಧ್ಯಕ್ಷ ಬೂದನೂರು ರವೀಶ್, ಶಿಕ್ಷಕರ ಸಂಘದ ಉಪಾಧ್ಯಕ್ಷೆ ರೂಪಾ, ಬೂದನೂರು ವೆಂಕಟೇಶ್, ಶಿವಯ್ಯ, ವೆಂಕಟಪ್ಪ, ಸಿ.ಕಾಳಪ್ಪಾಜಿ, ಮಹೇಶ್, ಸಿಂಗಯ್ಯ, ಚಿಕ್ಕಸ್ವಾಮಿ, ಮಹದೇವು, ಕೆಟಿಎಸ್ ವಿನೋದ್, ಸೋಮಶೇಖರ್, ಶಿವಾಜಿ, ಮಂಜು ಸೇರಿದಂತೆ ವಿದ್ಯಾರ್ಥಿಗಳು ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಹಾಜರಿದ್ದರು

# ಇಂದು ನೂತನ ಮುಖ್ಯಮಂತ್ರಿಯಾಗಿ ಡಿಕೆಶಿ ಪದಗ್ರಹಣ

## ಇಷ್ಟು ವರ್ಷ ನಾನು ಪಟ್ಟ ಪರಿಶ್ರಮ, ಬದ್ಧತೆಗೆ ದೊರೆತ ಪ್ರತಿಫಲ | ನಿಯೋಜಿತ ಸಿಎಂ ಡಿ.ಕೆ ಶಿವಕುಮಾರ್ ಪ್ರತಿಕ್ರಿಯೆ

**ಬೆಂಗಳೂರು:** ಮುಖ್ಯಮಂತ್ರಿ ಹುದ್ದೆ ತಡವಾಗಿ ಬಂದಿರಬಹುದು, ಆದರೆ ನಿರಾಕರಿಸಿಲ್ಲ ಎಂದು ನಿಯೋಜಿತ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಮಂಗಳವಾರ ಹೇಳಿದ್ದಾರೆ. ಇಷ್ಟು ವರ್ಷ ಪಟ್ಟ ಪರಿಶ್ರಮ, ಬದ್ಧತೆಗೆ ದೊರೆತ ಪ್ರತಿಫಲದ ಕ್ಷಣ ಎಂದು ಬಣ್ಣಿಸಿದ್ದಾರೆ.

ಬುಧವಾರ ರಾಜ್ಯದ ನೂತನ ಮುಖ್ಯಮಂತ್ರಿಯಾಗಿ ಪದಗ್ರಹಣ ಮಾಡಲು ಸಜ್ಜಾಗಿರುವಂತೆಯೇ ಎಎನ್‌ಐ ವಿಶೇಷ ಸಂದರ್ಶದಲ್ಲಿ ಮಾತನಾಡಿದ ಡಿಕೆ ಶಿವಕುಮಾರ್, ತನ್ನ ರಾಜಕೀಯ ಜೀವನ ವೈಯಕ್ತಿಕ ಮಹತ್ವಕಾಂಕ್ಷೆಗಿಂತಲೂ ಕಠಿಣ ಪರಿಶ್ರಮದ ಮೇಲೆ ರೂಪುಗೊಂಡಿದೆ. ಈ ಹಂತ ತಲುಪುವಲ್ಲಿ ಕಾಂಗ್ರೆಸ್ ಪಕ್ಷದ ಪಾತ್ರ ಮಹತ್ವದ್ದಾಗಿದೆ ಎಂದಿದ್ದಾರೆ.


"ಇದು ಕನಸಾಗಿರಲಿಲ್ಲ. ಅದು ಸಮರ್ಪಣೆಯಾಗಿ–ತ್ತು. ಪಕ್ಷಕ್ಕಾಗಿ ಕಠಿಣ ಪರಿಶ್ರಮ ಪಟ್ಟಿದ್ದೇನೆ. ಹೀಗಾಗಿ ಈಗ ಸಿಎಂ ಹುದ್ದೆ ದೊರೆತಿದೆ.

ತಡವಾಯಿತು. ಆದರೆ ನಿರಾಕರಿಸಲಿಲ್ಲ. ನಾನು ಕಾಂಗ್ರೆಸ್ ಪಕ್ಷದ ಇತಿಹಾಸದೊಂದಿಗೆ ಈ ಪ್ರಜಾಪ್ರಭುತ್ವ ವ್ಯವಸ್ಥೆಯ ಮೇಲೆ ನಿಂತಿರುವ ಕಾಂಗ್ರೆಸ್ ಸಾಮಾನ್ಯ ಕಾರ್ಯಕರ್ತ ಅಷ್ಟೇ ಎಂದರು.

ಕಾಂಗ್ರೆಸ್ ವರಿಷ್ಠರು ಹಾಗೂ ಗಾಂಧಿ ಕುಟುಂಬದ ಜೊತೆಗಿನ ನಿಷ್ಠೆ ಕುರಿತು ಮಾತನಾಡಿದ ಡಿಕೆ ಶಿವಕುಮಾರ್, ಪಕ್ಷ ನನ್ನಲ್ಲಿ ನಂಬಿಕೆ ಇಟ್ಟು ಪದೇ ಪದೇ ಜವಾಬ್ದಾ–ರಿಗಳನ್ನು ವಹಿಸಿತ್ತು ಎಂದು ತಿಳಿಸಿದರು.

ಗಾಂಧಿ ಕುಟುಂಬದ ಮೇಲಿನ ನಿಷ್ಠೆ ಮತ್ತು ಗೌರವದ ಸಂಕೇತವಾಗಿ ತಮ್ಮ ಒಡೆತನದ ಚಿತ್ರಮಂದಿರಕ್ಕೆ (ಥಿಯೇಟರ್‌ಗೆ) 'ಇಂದಿರಾ' ಎಂದು ಇಂದಿರಾ ಗಾಂಧಿ ಹೆಸರು ಇಟ್ಟಿದ್ದೇನೆ. ಅದು ಗಾಂಧಿ ಕುಟುಂಬದೊಂದಿಗೆ ನನಗಿದ್ದ ಬದ್ಧತೆಯಾಗಿದೆ. ಅವರು ನನ್ನನ್ನು ನಂಬಿದ್ದರು. ನನಗೆ ವಿವಿಧ ಅವಕಾಶಗಳನ್ನು ನೀಡಿದರು. ಆದ್ದರಿಂದ ಇಲ್ಲಿಯವರೆಗೆ ರಾಜೀವ್ ಗಾಂಧಿಯವರ ಕುಟುಂಬಕ್ಕೆ ತುಂಬಾ ನಿಷ್ಠರಾಗಿರುವುದು ನನ್ನ ಬದ್ಧತೆಯಾಗಿದೆ ಎಂದು ಹೇಳಿದರು.





"ಕಾಂಗ್ರೆಸ್ ನಾಯಕರಾದ ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿ ಅವರು ದೇಶದ ಅತ್ಯುನ್ನತ ರಾಜಕೀಯ ಹುದ್ದೆಯನ್ನು ಅಲಂಕರಿಸುವ ಅವಕಾಶಗಳಿದ್ದರೂ ಇಬ್ಬರೂ ವೈಯಕ್ತಿಕ ತ್ಯಾಗಗಳನ್ನು ಮಾಡಿದ್ದಾರೆ. ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಪ್ರಧಾನಿಯಾಗಬಹುದಿತ್ತು, ಆದರೆ ಅವರು ಹಾಗೆ ಮಾಡಲಿಲ್ಲ. ದೇಶದ ಜನತೆಗಾಗಿ ಅವರು ಹೋರಾಟ ಮಾಡುತ್ತಿದ್ದಾರೆ. ಆದ್ದರಿಂದ ನನ್ನ ಕೆಲಸವನ್ನು ನಂಬಿಕೆಯಿಂದ ಮಾಡುವುದು ನನ್ನ ಕರ್ತವ್ಯ."

ಡಿ.ಕೆ. ಶಿವಕುಮಾರ್
ನಿಯೋಜಿತ ಮುಖ್ಯಮಂತ್ರಿ

## ಡೊನೇಶನ್ ಹಾವಳಿ ತಡೆಗಟ್ಟಲು ಆಗ್ರಹಿಸಿ ಕರವೇ ಮನವಿ

■ ಉದಯರಶ್ಮಿ ದಿನಪತ್ರಿಕೆ

ಇಂಡಿ: ನಗರ ಹಾಗೂ ಗ್ರಾಮೀಣ ಭಾಗದಲ್ಲಿ ನಾಯಿಕೊಡೆಗಳಂತೆ ಹೆಮ್ಮರವಾಗಿ ಬೆಳೆದಿರುವ ಖಾಸಗಿ ಶಿಕ್ಷಣ ಸಂಸ್ಥೆಗಳ ಡೊನೇಶನ್ ಹಾವಳಿಗೆ ಜನಸಾಮಾನ್ಯರು ತತ್ತರಿಸಿ ಹೋಗಿದ್ದಾರೆ. ಮಿತಿಮೀರಿದ ಡೊನೇಶನ್ ಹಾವಳಿ ಕೂಡಲೇ ತಡೆಗಟ್ಟಬೇಕು ಎಂದು ತಹಶಿಲ್ದಾರ ಬಿ.ಎಸ್ ಕಡಕಭಾವಿ ಅವರಿಗೆ ಕರ್ನಾಟಕ ಯುವ ರಕ್ಷಣಾ ವೇದಿಕೆ ಇಂಡಿ ತಾಲೂಕು ಘಟಕದ ಪದಾಧಿಕಾರಿಗಳು ಸೋಮವಾರ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ತಾಲ್ಲೂಕು ಘಟಕದ ಅಧ್ಯಕ್ಷ ಅನೀಲ ಕೋಳಿ ಮಾತನಾಡಿ, ತಾಲೂಕಿನಾದ್ಯಾಂತ ಖಾಸಗಿ ಶಾಲೆಗಳಲ್ಲಿ ಡೊನೇಶನ್ ಹಾವಳಿ ಹೆಚ್ಚಾಗಿದೆ. ನಗರ ಹಾಗೂ ಗ್ರಾಮೀಣ ಪ್ರದೇಶ ಸೇರಿದಂತೆ ಖಾಸಗಿ ಶಿಕ್ಷಣ ಸಂಸ್ಥೆಗಳಿದ್ದು, ಒಂದೊಂದು ಶಿಕ್ಷಣ ಸಂಸ್ಥೆಗಳು ಒಂದೊಂದು ರೀತಿಯ ಶಿಕ್ಷಣ ಶುಲ್ಕವನ್ನು ಪಡೆಯುತ್ತಿವೆ. ಎಲ್‌ಕೆಜಿಯಿಂದ ಎಸ್.ಎಸ್.ಎಲ್.ಸಿ. ವರೆಗೂ ಕನಿಷ್ಠ ರೂ. 10 ಸಾವಿರದಿಂದ ರಿಂದ ಗರಿಷ್ಠ ರೂ.65 ಸಾವಿರ ಶಿಕ್ಷಣ ಶುಲ್ಕು ಪಡೆಯುತ್ತಿವೆ ಮತ್ತು ಪಠ್ಯಪುಸ್ತಕ, ಶಾಲಾಸಮವಸ್ತ್ರ, ಸ್ಕೂಲ್ ಬ್ಯಾಗ್, ಶಾಲಾ ವಾಹನ ಇತರೆ ಶುಲ್ಕ ಸೇರಿದರೆ ಪ್ರತಿವರ್ಷ ರೂ. 30 ರಿಂದ ರೂ. 50 ಸಾವಿರ ರೂಪಾಯಿಗಳನ್ನು ವಿದ್ಯಾರ್ಥಿಗಳು ಭರಿಸಬೇಕು. ಸಾರ್ವಜನಿಕ ಶಿಕ್ಷಣ ಇಲಾಖೆಯ ನಿಯಮಗಳನ್ನು ಗಾಳಿಗೆ ತೂರಿ ಖಾಸಗಿ ಶಿಕ್ಷಣ ಸಂಸ್ಥೆಯವರು ಬಡ ವಿದ್ಯಾರ್ಥಿಗಳನ್ನು ಸುಲಿಗೆ ಮಾಡುತ್ತಿವೆ. ಈ ಖಾಸಗಿ ಶಿಕ್ಷಣ ಸಂಸ್ಥೆಗಳ ವಿರುದ್ಧ ಶಿಕ್ಷಣ ಇಲಾಖೆ ಅಧಿಕಾರಿಗಳು ಕಾನೂನು ಕ್ರಮ ಕೈಗೊಳ್ಳದಿರುವುದು ವಿದ್ಯಾರ್ಥಿಗಳ ಪಾಲಕರಿಗೆ ಅನ್ಯಾಯವಾದಂತೆ ಎಂದರು.

ಈ ಕೂಡಲೇ ತಹಶೀಲ್ದಾರ ಹಾಗೂ ಶಿಕ್ಷಣ ಇಲಾಖೆ ಅಧಿಕಾರಿಗಳು ಖಾಸಗಿ ಶಿಕ್ಷಣ ಸಂಸ್ಥೆಯವರು, ಪೋಷಕರ, ಜನಪ್ರತಿನಿಧಿಗಳ, ವಿವಿಧ ಸಂಘಟನೆಗಳ ಸಭೆ ಕರೆದು ಡೊನೇಶನ್ ಹಾವಳಿಗೆ ಕಡಿವಾಣ ಹಾಕುವ ಕಾರ್ಯ ನಡೆಯಬೇಕು. ಒಂದು ವೇಳೆ ಪ್ರಮಾಣಿಕ ಪ್ರಯತ್ನ ಮಾಡಬೇಕು ಇಲ್ಲದಿದ್ದರೆ, ಪ್ರಮುಖ ಬೀದಿಗಳಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಗುವುದು ಎಂದು ಶಿಕ್ಷಣ ಇಲಾಖೆ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಕಾರ್ತಿಕ ಧರನೆವರ, ನಿತೀನ್ ಅಂಜುಟಗಿ, ಸಂತೋಷ ತಳವಾರ, ಪರಶುರಾಮ ಕರಜಗಿ, ಸಂದೀಪ ಕರಜಗಿ, ಶ್ರೀಧರ ನಾಟೀಕಾರ, ಆಕಾಶ ಕುಂಬಾರ, ರವಿ ಧರನೆವರ, ರಾಹುಲ್ ಹಿಳ್ಳಿ, ಸಂಜೀವ ಅಂಜುಟಗಿ, ಶಶಿ ಹಿರೇಮಠ, ಅಂಬರೀಶ್ ಬಗಲಿ, ಅಂಬರೀಶ್ ಜುಮನಾಳ ಸೇರಿದಂತೆ ಅನೇಕ ಯುವಕರು ಹಾಜರಿದ್ದರು.




## ಮಹಾದೇವಪ್ಪ ಗೆ ಸರ್ಕಾರದಲ್ಲಿ ಉನ್ನತ ಸ್ಥಾನ ನೀಡಲು ಒತ್ತಾಯ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ರಾಜ್ಯದ ದಲಿತ ಸಮುದಾಯದ ಆಶೋತ್ತರಗಳಿಗೆ ಧ್ವನಿಯಾಗಿರುವ ಮಹಾದೇವಪ್ಪ ಅವರು ಹಲವು ದಶಕಗಳಿಂದ ಸಾರ್ವಜನಿಕ ಜೀವನದಲ್ಲಿ ಸೇವೆ ಸಲ್ಲಿಸುತ್ತಿದ್ದು, ಅವರ ನಾಯಕತ್ವ ಮತ್ತು ಆಡಳಿತ ಅನುಭವವನ್ನು ಪರಿಗಣಿಸಿ ಸರ್ಕಾರದಲ್ಲಿ ಉನ್ನತ ಸ್ಥಾನಮಾನ ನೀಡುವುದು ಸೂಕ್ತ. "ಸಾಮಾಜಿಕ ನ್ಯಾಯದ ಪರವಾಗಿ ನಿರಂತರ ಹೋರಾಟ ನಡೆಸಿರುವ ಡಾ. ಹೆಚ್.ಸಿ.ಮಹಾದೇವಪ್ಪ ಅವರಿಗೆ ಸರ್ಕಾರದಲ್ಲಿ ಇನ್ನಷ್ಟು ಮಹತ್ವದ ಜವಾಬ್ದಾರಿ ನೀಡಬೇಕು ಎಂದು ವಿವಿಧ ದಲಿತ ಸಂಘಟನೆಗಳು ಹಾಗೂ ಮುಖಂಡರು ಒತ್ತಾಯಿಸಿದ್ದಾರೆ.

ರಾಜ್ಯ ಸರ್ಕಾರದಲ್ಲಿ ಹಿರಿಯ ದಲಿತ ನಾಯಕರಾದ ಡಾ.ಹೆಚ್.ಸಿ.ಮಹಾದೇವಪ್ಪ ಅವರಿಗೆ ಉನ್ನತ ಸ್ಥಾನಮಾನ ನೀಡಬೇಕು. ಸಾಮಾಜಿಕ ನ್ಯಾಯ, ಹಿಂದುಳಿದ ವರ್ಗಗಳ ಅಭಿವೃದ್ಧಿ ಹಾಗೂ ಪಕ್ಷ ಸಂಘಟನೆಯಲ್ಲಿ ಮಹತ್ವದ ಕೊಡುಗೆ ನೀಡಿರುವ ಡಾ.ಹೆಚ್.ಸಿ. ಮಹಾದೇವಪ್ಪ ಅವರಿಗೆ ಸಚಿವ ಸಂಪುಟದಲ್ಲಿ ಹೆಚ್ಚಿನ ಜವಾಬ್ದಾರಿ ನೀಡುವ ಮೂಲಕ ಅವರ ಅನುಭವವನ್ನು ರಾಜ್ಯದ ಅಭಿವೃದ್ಧಿಗೆ ಬಳಸಿಕೊಳ್ಳಬೇಕು. ಇದರಿಂದ ದಲಿತ ಸಮುದಾಯದ ಆಶಯಗಳಿಗೆ ಹೆಚ್ಚಿನ ಬಲ ದೊರೆಯಲಿದೆ ಎಂದು ದಲಿತ ಮುಖಂಡ ರಾಜಶೇಖರ ಕೂಚಬಾಳ ಮನವಿ ಮಾಡಿದ್ದಾರೆ.

## ನಾನೇ ಬ್ರಹ್ಮ ಎನ್ನುವ ಸತ್ಯ ತಿಳಿದು ಬದುಕಿ :ಪ್ರಣವ ಪ್ರಕಾಶ ಶ್ರೀ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ಸದ್ಗುರು ದೊರೆಯುವುದು ಸುಲಭವಲ್ಲ. ದೊರೆತ ಗುರುವನ್ನು ಆರಾಧಿಸಬೇಕು. ಗುರುವಿನ ಬಗ್ಗೆ ಸಂಶಯ ಬೇಡ. ನಾವು ಯಾರ ಸಂಗ ಮಾಡುತ್ತೇವೆಯೋ ಅವರಂತಾಗುತ್ತೇವೆ. ಅದಕ್ಕೆ ಸಂಗ ಎನ್ನುವುದು ಬಹಳ ಮುಖ್ಯ ಎಂದು ವಿಜಯಪುರದ ಕೈವಲ್ಯ ಕುಟೀರದ ಪ್ರಣವ ಪ್ರಕಾಶ ಮಹಾರಾಜರು ಹೇಳಿದರು.

ಸಿಂದಗಿ ನಗರದ ಸಾರಂಗಮಠದ ಲಿಂ.ಸಿದ್ದಲಿಂಗಮಹಾಸ್ವಾಮೀಜಿ ಕಾನ್ಫರೆನ್ಸ್ ಹಾಲ್‌ನಲ್ಲಿ ಹುಣ್ಣಿಮೆ ನಿಮಿತ್ತ ಹಮ್ಮಿಕೊಂಡ 355ನೇ ಸದ್ವಿಚಾರ ಗೋಷ್ಠಿಯಲ್ಲಿ ಉಪನ್ಯಾಸ ನೀಡಿ ಮಾತನಾಡಿದ ಅವರು, ನಾನೇ ಬ್ರಹ್ಮ ಎನ್ನುವ ಸತ್ಯವನ್ನು ತಿಳಿದು ಬದುಕಬೇಕು. ನಾನೇ ಬ್ರಹ್ಮ ಎನ್ನುವುದು ದೃಢವಾಗಬೇಕಾದರೆ ಒಳ್ಳೆಯವರ ಸಹವಾಸ ಮಾಡಬೇಕು. ಸಮಾಜದ ಓರೆ ಕೋರೆಗಳನ್ನು ತಿದ್ದುವವರು ನಿಜವಾದ ಸಮರ್ಥನೆಯ ಗುರುಗಳು. ಈ ಸಾಲಿನಲ್ಲಿ ಸಿಂದಗಿಯ ಸಾರಂಗಮಠದ ಡಾ.ಪ್ರಭುಸಾರಂಗದೇವರು ಸಮರ್ಥ ಗುರುಗಳಾಗಿದ್ದಾರೆ. ಅವರನ್ನು ಪಡೆದ ನಾವು ನಿವೆಲ್ಲ ಧನ್ಯರು ಎಂದರು.

ಈ ವೇಳೆ ಸಾರಂಗಮಠದ ಪೀಠಾಧಿಪತಿ ಡಾ.ಪ್ರಭುಸಾರಂಗದೇವ ಶಿವಾಚಾರ್ಯರು ಪಾವನ ಸಾನಿಧ್ಯ ವಹಿಸಿದ್ದರು. ಸಮ್ಮುಖವನ್ನು ಉತ್ತರಾಧಿಕಾ–ರಿಗಳಾದ ಡಾ.ವಿಶ್ವಪ್ರಭುದೇವ ಶಿವಾಚಾರ್ಯರು ವಹಿಸಿದ್ದರು. ಕಾರ್ಯಕ್ರಮದಲ್ಲಿ ಎಚ್.ಟಿ.ಕುಲಕರ್ಣಿ, ಶರಣಗೌಡ ಬಿರಾದಾರ, ವಿರೇಶ ಜೋಗುರ, ಮುಕ್ತಾಯಕ್ಕ ಕತ್ತಿ, ಬಿ.ಜಿ.ಮಠ, ಚೆನ್ನಪ್ಪ ಕತ್ತಿ, ನೀಲಾಂಬಿಕಾ ಕತ್ತಿ, ಅಶೋಕ ವಾರದ, ಜಿ.ಎಸ್. ಜಂಗಿನಮಠ ಸೇರಿದಂತೆ ಶ್ರೀಮಠದ ಭಕ್ತರು ಇದ್ದರು.

ಡಾ.ಶರಣಬಸವ ಜೋಗುರ ಸ್ವಾಗತಿಸಿದರು. ಶಕುಂತಲಾ ಹಿರೇಮಠ ಪ್ರಾರ್ಥಿಸಿದರು. ಪೂಜಾ ಹಿರೇಮಠ ನಿರೂಪಿಸಿದರು.



## ರೈತರ ಮರಣ ಶಾಸನ ಆಗಲಿರುವ ಬಿಡದಿ ಟೌನ್ ಶಿಪ್ ಯೋಜನೆ

■ ಉದಯರಶ್ಮಿ ದಿನಪತ್ರಿಕೆ



**ಬಿಡದಿ ಟೌನ್ ಶಿಪ್, ಶರಾವತಿ ಪಂಪ್ಡ್ ಸ್ಟೋರೇಜ್, ಕ್ರಿಕೆಟ್ ಸ್ಟೇಡಿಯಂ ಯೋಜನೆ ಕೈಬಿಡದಿದ್ದರೆ ಹೋರಾಟ ನಿಶ್ಚಿತ :ಶಾಸಕ ಯತ್ನಾಳ ಎಚ್ಚರಿಕೆ**

ವಿಜಯಪುರ: ರೈತರ ಮರಣ ಶಾಸನ ಆಗಲಿರುವ ಬಿಡದಿ ಟೌನ್ ಶಿಪ್ ಯೋಜನೆ, ಪಶ್ಚಿಮ ಘಟ್ಟಗಳಿಗೆ ಮಾರಕವಾಗಲಿರುವ ಶರಾವತಿ ಪಂಪ್ಡ್ ಸ್ಟೋರೇಜ್ ಹಾಗೂ ಆನೇಕಲ್ ನ ಫಲವತ್ತಾದ ಭೂಮಿಯಲ್ಲಿ ಬರುತ್ತಿರುವ ಕ್ರಿಕೆಟ್ ಸ್ಟೇಡಿಯಂ ಯೋಜನೆಗಳನ್ನು ಮುಂಬರುವ ಸಂಪುಟ ಸಭೆಯಲ್ಲಿ ರದ್ದುಗೊಳಿಸದಿದ್ದರೆ, ಸದನದ ಒಳಗೆ ಹಾಗೂ ಹೊರಗೆ ಹೋರಾಟ ನಿಶ್ಚಿತ ಎಂದು ಶಾಸಕ ಬಸನಗೌಡ ಪಾಟೀಲ ಅವರು ರಾಜ್ಯ ಸರ್ಕಾರಕ್ಕೆ ಎಚ್ಚರಿಕೆ ನೀಡಿದ್ದಾರೆ.

ರಿಯಲ್ ಎಸ್ಟೇಟ್ ಲಾಬಿಗೆ, ಬಂಡವಾಳಶಾಹಿಗಳ ಒತ್ತಡಕ್ಕೆ ಶರಣಾಗಿರುವ ಸರ್ಕಾರ ಒತ್ತಾಯಪೂರ್ವಕವಾಗಿ ರೈತರ ಜಮೀನನ್ನು ಪಡೆಯುತ್ತಿರುವುದು ಖಂಡನೀಯ. ರೇಷ್ಮೆ, ಮಾವು, ಅಡಿಕೆ, ಬಾಳೆ, ತರಕಾರಿ, ಹಲಸು, ಪೇರಳೆ ಹೀಗೆ ವಿವಿಧ ರೀತಿಯ ಬೆಳೆಗಳನ್ನು ಬೆಳೆಯುತ್ತಿರುವ ಬಿಡದಿಯ ರೈತರು ಸಮೃದ್ಧರಾಗಿದ್ದರೆ. ಸುಮಾರು 6500 ಎಕರೆಯ ಅತ್ಯಂತ ಫಲವತ್ತಾದ, ನೀರಾವರಿ ಭೂಮಿಯನ್ನು ವಸತಿ ಉದ್ದೇಶಕ್ಕೆ ಸ್ವಾಧೀನಪಡೆಸಿಕೊಳ್ಳುತ್ತಿರುವ ಸರ್ಕಾರದ ಕ್ರಮ ಅತಾರ್ಕಿಕವಾದದ್ದು.

ಕೃಷಿಗೆ ಯೋಗ್ಯವಲ್ಲದ ಭೂಮಿಗಳಲ್ಲಿ ಕೈಗಾ–ರಿಕೆಗಳು, ವಸತಿ ಯೋಜನೆಗಳನ್ನು ರೂಪಿಸಬೇಕೇ ಹೊರತು ಸಮೃದ್ಧವಾದ ಕೃಷಿ ಭೂಮಿಯಲ್ಲಲ್ಲ. ಪಟ್ಟಭದ್ರ ಹಿತಾಸಕ್ತಿಗಳಿಗೆ ಮಣಿದು ಕೃಷಿ ಭೂಮಿಯನ್ನು ವಸತಿ ಯೋಜನೆ, ಎ1 ಸಿಟಿಗೆ ಮೀಸಲಿಡುವುದು ಸರ್ಕಾರದ ದೂರದರ್ಶಿತ್ವದ ಕೊರತೆ ತೋರಿಸುತ್ತದೆ ಎಂದು ತಮ್ಮ ಎಕ್ಸ್ ಖಾತೆಯಲ್ಲಿ ಟ್ವಿಟ್ ಮಾಡಿದ್ದಾರೆ.

## ಗ್ರಾಮೀಣ ಪತ್ರಕರ್ತರ ಬಸ್ ಪಾಸ್ ಷರತ್ತುಗಳ ಸರಳೀಕರಣ

### ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರ ಮತ್ತು ಪದಾಧಿಕಾರಿಗಳಿಂದ ಸ್ವಾಗತ

■ ಉದಯರಶ್ಮಿ ದಿನಪತ್ರಿಕೆ

ಕಲಬುರಗಿ: ಗ್ರಾಮೀಣ ಪತ್ರಕರ್ತರ ಉಚಿತ ಬಸ್ ಪಾಸ್ ಯೋಜನೆ ಜಾರಿಗೆ ಅಡ್ಡಿಯಾಗಿದ್ದ ಕಠಿಣ ಷರತ್ತುಗಳನ್ನು ತೆಗೆದು, ನಿಯಮಾವಳಿ ಸರಳೀಕರಣ ಮಾಡಿ ಸರ್ಕಾರ ಆದೇಶ ಹೊರಡಿಸಿದೆ.



ಬೀದರನಲ್ಲಿ ನಡೆದ 40ನೇ ರಾಜ್ಯ ಪತ್ರಕರ್ತರ ಸಮ್ಮೇಳನದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ) ಒತ್ತಾಯಕ್ಕೆ ಸ್ಪಂದಿಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅದೇ ವೇದಿಕೆಯಲ್ಲಿ ಕಠಿಣ ಷರತ್ತುಗಳನ್ನು ಕೈಬಿಡುವುದಾಗಿ ಭರವಸೆ ನೀಡಿದ್ದರು.

ಸರ್ಕಾರಕ್ಕೆ ಮೂರು ವರ್ಷ ತುಂಬಿದಾಗ ಕೆಯುಡಬ್ಲ್ಯೂಜೆ ಏರ್ಪಡಿಸಿದ್ದ ಸಂವಾದದಲ್ಲಿ ಭಾಗವಹಿಸಿದ್ದ ಸಿಎಂ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಅವರು ಈ ಬಗ್ಗೆ ವಾರದೊಳಗೆ ಕ್ರಮ ವಹಿಸುವುದಾಗಿ ತಿಳಿಸಿದ್ದರು. ಸಿಎಂ ಸೂಚನೆ ಮೇರೆಗೆ ಹೊಸ ಆದೇಶ ಹೊರಬಿದ್ದಿದೆ.

ಪೂರ್ಣಾವಧಿಗೆ ಸೀಮಿತವಾಗಿದ್ದನ್ನು ಬದಲಿಸಿ, ಅರೆಕಾಲಿಕ ವರದಿಗಾರರಿಗೂ ಯೋಜನೆ ವಿಸ್ತರಿಸಲಾಗಿದೆ.

ಸೌಲಭ್ಯ ಪಡೆಯಲು 11 ತಿಂಗಳ ಲೈನೇಜ್ ಪಡೆದಿರುವ ಬ್ಯಾಂಕ್ ಸ್ಟೇಟ್ ಮೆಂಟ್ ಕಡ್ಡಾಯವಾಗಿದ್ದನ್ನು ಷರತ್ತಿನಲ್ಲಿ ಕೈಬಿಡಲಾಗಿದೆ.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ) ಸತತ ಹೋರಾಟಕ್ಕೆ ಸ್ಪಂದಿಸಿ ಬೇಡಿಕೆ ಈಡೇರಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿಸಿಎಂ (ಭಾವಿ ಸಿಎಂ) ಡಿ.ಕೆ.ಶಿವಕುಮಾರ್ ಅವರು ಈ ನಿಟ್ಟಿನಲ್ಲಿ ಸತತವಾಗಿ ಸ್ಪಂದಿಸಿದ ಸಿಎಂ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ಅವರಿಗೆ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರ, ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್, ಕಾರ್ಯದರ್ಶಿ ಪುಂಡಲೀಕ ಬಾಳೋಜಿ ಸೇರಿದಂತೆ ರಾಜ್ಯ ಪದಾಧಿಕಾ–ರಿಗಳು ಅಭಿನಂದನೆ ಸಲ್ಲಿಸಿದ್ದಾರೆ.

### ವಿಜಯಪುರ - ಕಲಬುರ್ಗಿ ಜಿಲ್ಲಾ ಘಟಕಗಳಿಂದ ಅಭಿನಂದನೆ

ಕೆಯುಡಬ್ಲ್ಯೂಜೆ ಸತತ ಹೋರಾಟಕ್ಕೆ ಸ್ಪಂದಿಸಿ ಬೇಡಿಕೆ ಈಡೇರಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿಸಿಎಂ (ಭಾವಿ ಸಿಎಂ) ಡಿ.ಕೆ.ಶಿವಕುಮಾರ್, ಹಾಗೂ ಈ ನಿಟ್ಟಿನಲ್ಲಿ ಸತತವಾಗಿ ಸ್ಪಂದಿಸಿದ ಸಿಎಂ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಅವರಿಗೆ ವಿಜಯಪುರ ಜಿಲ್ಲಾ ಅಧ್ಯಕ್ಷ ಅಶೋಕ ಯಡಳ್ಳಿ, ಪ್ರಧಾನ ಕಾರ್ಯದರ್ಶಿ ಇಂದುಶೇಖರ ಮಣೂರ, ರಾಜ್ಯ ಕಾರ್ಯಕಾರಿಣಿ ಸದಸ್ಯ ಪ್ರಕಾಶ ಬೆಣ್ಣೂರ, ಕಲಬುರ್ಗಿ ಜಿಲ್ಲಾಧ್ಯಕ್ಷ ಬಾಬುರಾವ ಯಡ್ರಾಮಿ ಮತ್ತು ಉಭಯ ಜಿಲ್ಲೆಯ



# ವಿಶ್ವೇಶ್ವರ ಬಾಲಭಾರತಿ ಶಾಲೆಯಲ್ಲಿ ಸಂಭ್ರಮದ ಪ್ರಾರಂಭ

■ ಉದಯರಶ್ಮಿ ದಿನಪತ್ರಿಕೆ

ಆಲಮೇಲ: ಪಟ್ಟಣದ ವಿಶ್ವೇಶ್ವರ ಬಾಲಭಾರತಿ ಅನುದಾನಿತ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸಂಭ್ರಮದ ಶಾಲಾ ಪ್ರಾರಂಭ ಹಾಗೂ ಮೇಗಾ ಪೋಷಕರ ಸಭೆ ವಿಜೃಂಭಣೆಯಿಂದ ಆಚರಿಸಲಾಯಿತು.

ಮೊದಲ ದಿನವೇ ಶಾಲೆಯು ಮದುವಣ-ಗಿತ್ತಿಯಂತೆ ಬಣ್ಣ ಬಣ್ಣದ ಬಲೂನ್, ರಿಬ್ಬನ್, ಹೂ-ತಳಿರು ತೋರಣಗಳಿಂದ ಕಂಗೊಳಿಸುತ್ತಿತ್ತು. ಶಾಲೆಯ ಆವರಣದಲ್ಲಿ ಚಿಣ್ಣರು ಹೊಸ ಬಟ್ಟೆ ತೊಟ್ಟು ಅತೀ ಉತ್ಸಾಹದಿಂದ ಓಡಾಡುತ್ತಿದ್ದು ಕಂಡು ಬಂತು.

ಈ ವೇಳೆ ಸಂಸ್ಥೆಯ ಅಧ್ಯಕ್ಷ ಶ್ರೀಶೈಲಪ್ಪ ಜೋಗೂರ ಹೊಸದಾಗಿ ಶಿಶುವಿಹಾರ ಹಾಗೂ ಒಂದನೆಯ ತರಗತಿಗೆ ದಾಖಲಾತಿ ಆದ ಸುರಕ್ಷಾ ರಾಜಶೇಖರ ಅಲೋಣಿ ಹಾಗೂ ಅನುಷ್ಕಾ ವಿಲಾಸ ಅಲೋಣಿ ಮಕ್ಕಳಿಗೆ ಶಾಲಾ ಬ್ಯಾಗ್, ನೋಟ್ ಬುಕ್, ಕಂಪಾಸ್ ಪೆಟ್ಟಿಗೆ ಹಾಗೂ ಪಠ್ಯಪುಸ್ತಕ ಉಚಿತವಾಗಿ ಕೊಡಮಾಡುವ ಮುಖಾಂತರ ಸ್ವಾಗತಿಸಿದರು. ಶಿಕ್ಷಕವೃಂದದವರು ಎಲ್ಲಾ ಮಕ್ಕಳ ಮೇಲೆ ಪುಷ್ಪಾರ್ಚನೆ ಮಾಡುವುದರ ಮುಖಾಂತರ ಮಕ್ಕಳಿಗೆ ಸ್ವಾಗತಿಸಿದರು.

ಈ ವೇಳೆ ಮಾತನಾಡಿದ ಜೋಗೂರವರು ಉಜ್ವಲ ಭವಿಷ್ಯ, ಉಜ್ವಲ ಕಲಿಕೆ ಎಂಬ ಹೊಸ ಧ್ಯೇಯ ವಾಕ್ಯದೊಂದಿಗೆ ಈ ವರ್ಷದ ಶಾಲಾ ಪ್ರಾರಂಬೋತ್ಸವವು ಅತ್ಯಂತ ವಿಜೃಂಭಣೆಯಿಂದ ಉಚಿತ ಪಠ್ಯಪುಸ್ತಕ ಕೊಡಮಾಡುವುದರ ಮುಖಾಂತರ ಪುಷ್ಪಾರ್ಚನೆ ಮಾಡುವುದರ ಮುಖಾಂತರ ದೇವರ ಸ್ವರೂಪರಾದ ಮಕ್ಕಳಿಗೆ ಸ್ವಾಗತಿಸಿರುವುದು ಸಂತೋಷ ತಂದಿದೆ ಎಂದರು.

ಈ ವೇಳೆ ಮುಖ್ಯ ಶಿಕ್ಷಕ ಲಕ್ಷ್ಮೀಪುತ್ರ ಕಿರನಳ್ಳಿ, ಚಂದ್ರಕಾಂತ ದೇವರಮನಿ, ಪ್ರಶಾಂತ ಗಡದೆ, ಲಕ್ಷ್ಮೀಬಾಯಿ ಹಳೇಮನಿ, ಸುವರ್ಣ ಸಾರಂಗಮಠ, ಸೀತಾ ಆರೇಶಂಕರ, ಸರುಬಾಯಿ ಬಂಡಗರ, ಸುನೀತಾ ಗುಂಡದ ಮುಂತಾದವರು ಉಪಸ್ಥಿತರಿದ್ದರು

# ರೈತರಿಗೆ ಉಚಿತ ಬಿತ್ತನೆ ಬೀಜ ರಸಗೊಬ್ಬರ ವಿತರಿಸುವಂತೆ ಸಿರಗಾಪೂರ ಆಗ್ರಹ



ಕಲಬುರಗಿ:ಕಳೆದ ವರ್ಷ ಅತಿವೃಷ್ಟಿಯಿಂದ ರೈತರು ಬೆಳೆದ ಬೆಳೆ ಹಾನಿಯಾಗಿ ಆರ್ಥಿಕ ಸಂಕಷ್ಟ ಎದುರಾಗಿದ್ದು,ಸರಕಾರ ಮುಂಗಾರು ಬಿತ್ತನೆಗೆ ಉಚಿತವಾಗಿ ಬಿತ್ತನೆ ಬೀಜ ಮತ್ತು ರಸಗೊಬ್ಬರ ನೀಡಬೇಕು ಎಂದು ಕನ್ನಡ ಭೂಮಿ ಜಾಗೃತಿ ಸಮಿತಿ ರಾಜ್ಯಾಧ್ಯಕ್ಷ ಲಿಂಗರಾಜ ಸಿರಗಾಪೂರ ಅವರು ಕೇಂದ್ರ ಮತ್ತು ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಪತ್ರಿಕಾ ಪ್ರಕಟಣೆ ನೀಡಿರುವ ಅವರು ಇಡೀ ರಾಜ್ಯದಲ್ಲೇ ಕಲಬುರಗಿ, ಬೀದರ್ ಹಾಗೂ ಯಾದಗಿರಿ ಜಿಲ್ಲೆಗಳಲ್ಲಿ ಅತಿವೃಷ್ಟಿಯಾಗಿ ಬೆಳೆಗಳು ಸಂಪೂರ್ಣವಾಗಿ ಹಾನಿಯಾಗಿವೆ.ಈ ಮಧ್ಯೆ ಕಲಬುರಗಿ ಜಿಲ್ಲೆಯ ಪ್ರಮುಖ ಬೆಳೆ ತೊಗ-ರಿಗೆ ನೆಟೆ ರೋಗ ಹತ್ತಿಕೊಂಡು ಗಣನೀಯವಾಗಿ ಇಳುವರಿ ಕಡಿಮೆಯಾಗಿದ್ದರಿಂದ ರೈತರು ತೊಂದರೆ ಅನುಭವಿಸುವಂತಾಗಿದೆ.ಬಿತ್ತನೆಗೆ ಖರ್ಚು ಮಾಡಿದ ಅರ್ಧದಷ್ಟು ಹಣ ರೈತರ ಕೈ ಸೇರಿಲ್ಲ.ಇನ್ನು ಬೆಳೆ ಹಾನಿಗೆ ನೀಡಿರುವ ಪರಿಹಾರದ ಹಣ ಸಾಕಷ್ಟು ರೈತರ ಖಾತೆಗೆ ಬಂದಿಲ್ಲ.ಕಳೆದ ಬಾರಿ ಹೆಚ್ಚಿನ ಪ್ರಮಾಣದಲ್ಲಿ ರೈತರು ಬೆಳೆ ವಿಮೆ ಮಾಡಿಸಿದ್ದಾರೆ.ಆದರೆ ಇಲ್ಲಿಯೂ ಕೂಡ ವಿಮಾ ಕಂಪನಿಗಳು ರೈತರ ಜೊತೆ ಚೆಲ್ಲಾಟವಾಡುತ್ತಿವೆ. ಇನ್ನು ಶೆ.60 ರಷ್ಟು ರೈತರಿಗೆ ವಿಮೆ ಹಣ ಬರಬೇಕಾಗಿದೆ.ವಿಳಂಬದಿಂದ ರೈತರು ಕಂಗಾಲಾಗಿದ್ದಾರೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.ನೂತನ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಅವರ ನೇತೃತ್ವದ ಸರಕಾರ ಜನರಿಗೆ ಅನೇಕ ಉಚಿತ ಭಾಗ್ಯಗಳನ್ನು ನೀಡಲು ಮುಂದಾಗಿದೆ. ಇದನ್ನು ಸ್ವಾಗತಿಸುತ್ತೇವೆ.ಆದರೆ ದೇಶದ ಬೆನ್ನೆಲುಬು,ಅನ್ನ ನೀಡುವ ರೈತರಿಗೆ ಉಚಿತವಾಗಿ ಬಿತ್ತನೆ ಬೀಜ ಮತ್ತು ರಸಗೊಬ್ಬರ ವಿತ-ರಿಸಲು ಸಂಕಷ್ಟವೇಕೆ ಎಂದು ಪ್ರಶ್ನಿಸಿದ ಅವರು ಸರ್ಕಾರಕ್ಕೆ ರೈತರ ಬಗ್ಗೆ ಕಾಳಜಿ ಇದೆ.ಹೀಗಾಗಿ ಕಾಂಗ್ರೆಸ್ ಸರ್ಕಾರದ ಮೇಲೆ ರೈತರು ಸಾಕಷ್ಟು ನಿರೀಕ್ಷೆಗಳನ್ನು ಇಟ್ಟುಕೊಂಡಿದ್ದಾರೆ.ಆದ್ದ-ರಿಂದ ಮುಖ್ಯಮಂತ್ರಿಗಳು ಕೂಡಲೇ ರೈತರಿಗೆ ಸಂಪೂರ್ಣ ಉಚಿತವಾಗಿ ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳನ್ನು ವಿತರಿಸುವಂತೆ ರೈತ ಸಂಪರ್ಕ ಕೇಂದ್ರಗಳಿಗೆ ಸೂಚಿಸಬೇಕು.ನಕಲಿ ಬೀಜ ಹಾಗೂ ರಸಗೊಬ್ಬರ ಮಾರಾಟ ತಡೆಗಟ್ಟಬೇಕು ಎಂದು ಅವರು ಆಗ್ರಹಿಸಿದ್ದಾರೆ.



# ಜೀವವೈವಿಧ್ಯತೆಗಳ ಸಂರಕ್ಷಣೆ ಮಾಡಿದರೆ ನಮಗೆ ಉಳಿಗಾಲ ಶೈಲೇಂದ್ರ ಕಾವಡಿ

ಬೀದರ್ : ಪರಿಸರ ಅಸಮತೋಲನದಿಂದ ಜೀವ ವೈವಿಧ್ಯತೆಗಳ ಮೇಲೆ ಭಾರಿ ಪರಿಣಾಮ ಬೀರುತ್ತಿದೆ ಎಂದು ಪರಿಸರವಾದಿ ಶೈಲೇಂದ್ರ ಕಾವಡಿ ಬೀದರ್ ತಾಲೂಕಿನ ಚಾಲುಕ್ಯ ಶಿಕ್ಷಣ ಶಿಕ್ಷಣ ಸಂಸ್ಥೆಯಲ್ಲಿ ಪರಿಸರವಾಹಿನಿ ಬೀದರ್ ಹಾಗೂ ರಾಮಾನುಜಂ ಬೇಸಿಗೆ ಕೋಚಿಂಗ್ ಸೆಂಟರ್ ನಲ್ಲಿ ಹಮ್ಮಿಕೊಂಡಿದ್ದ ಜೀವವೈವಿಧ್ಯತೆ ಜನಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುವುದು ತಿಳಿಸಿದರು. ವರ್ಷ ವರ್ಷ ಹೆಚ್ಚುತ್ತಿರುವ ಭೂತಾಪಮಾನ ಹೆಚ್ಚಳದಿಂದಾಗಿ ಹಲವಾರು ಜೀವ ವೈವಿಧ್ಯತೆಗಳ ಮೇಲೆ ಪರಿಣಾಮ ಬೀರುತ್ತಿವೆ ಹಲವಾರು ಪ್ರಾಣಿ ಪಕ್ಷಿಗಳು ಕೂಡ ಕಣ್ಮರೆಯಾಗುತ್ತಿವೆ ಎಂದರು. ಪರಿಸರ ಸಮತೋಲನ ಹಾಗೂ ಭೂತಾಪಮಾನ ಕಡಿಮೆ ಮಾಡಿದರೆ ನಮಗೆ ಉಳಿಗಾಲವಿದೆ ಎಂದರು. ಭೂತಾಪಮಾನ ಹೆಚ್ಚಳದಿಂದಾಗಿ ಮುಂಬರುವ ದಿನಗಳಲ್ಲಿ ಪರಾಗ ಸ್ಪರ್ಶದಲ್ಲಿ ಸಹಾಯ ಮಾಡುವ

ಚಿಟ್ಟೆ ಕೂಡ ಕಣ್ಮರೆಯಾಗಲಿವೆ. ಚಿಟ್ಟೆ ಮಾಯಾವದರಿಂದ ಕಾಫಿ ತೋಟದ ಮೇಲೆ ಪರಿಣಾಮ ಪರಿಣಾಮ ಬೀರಲಿದೆ ಹಾಗೂ ಮುಂದಿನ ದಿನಗಳಲ್ಲಿ ಜೇನುತುಪ್ಪ ಕೂಡ ಸಿಗಲಾರದಂತ ಪರಿಸ್ಥಿತಿ ಬರಲಿದೆ ಎಂದು ಕಾವಡಿ ವಿಷಾದದಿಂದ ತಿಳಿಸಿದರು. ಪ್ರತಿಯೊಬ್ಬರು ಜೀವ ವೈವಿಧ್ಯತೆಗಳ ಸಂರಕ್ಷಣೆಗೆ ಹಾಗೂ ಪರಿಸರ ಸಂರಕ್ಷಣೆಗೆ ವಿಶೇಷ ಕಾಳಜಿ ವಹಿಸಬೇಕೆಂದು ಕರೆ ನೀಡಿದರು. ವಿದ್ಯಾರ್ಥಿಗಳು ಮರಗಿಡ ಬೆಳೆಸುವ ಹವ್ಯಾಸ ಬೆಳೆಸಿಕೊಳ್ಳಬೇಕೆಂದು ತಿಳಿಸಿದರು. ವಿದ್ಯಾರ್ಥಿಗಳು ಕಡ್ಡಾಯವಾಗಿ ತಮ್ಮ ಮನೆಯಂಗಳದಲ್ಲಿ ಔಷಧೀಯ ಸಸ್ಯಗಳಾದ ತುಳಸಿ ನಲ್ಲಿ ನುಗ್ಗಿ ಗಿಡಗಳನ್ನು ಬೆಳೆಸಬೇಕೆಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು. ವಿದ್ಯಾರ್ಥಿಗಳು ಕಡ್ಡಾಯವಾಗಿ ತಮ್ಮ ಮನೆಯಲ್ಲಿ ಹೂವಿನ

ಗಿಡಗಳನ್ನು ಚಾಮ ಇವರು ಕಾರ್ಯಕ್ರಮ ಅಧ್ಯಕ್ಷತೆ ವಹಿಸಿದರು ಬೆಳೆಸಬೇಕೆಂದು ಕರೆ ನೀಡಿದರು. ರಾಮಾನುಜಂ ಕೋಚಿಂಗ್ ಸೆಂಟ-ರ್ ನ ಮುಖ್ಯಸ್ಥರಾದ ಶಿಕ್ಷಕರ ನಾಗೇಶ್ ಚಾಮ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಬೇಸಿಗೆ ಶಿಬಿರದ ಮಹತ್ವದ ಬಗ್ಗೆ ವಿವರಿಸಿದರು. ನರಸಿಂಗ್ ರಾಜಗಿರ ಆರಂಭದಲ್ಲಿ ಸ್ವಾಗತಿಸಿ ಕೊನೆಯಲ್ಲಿ ವಂದಿಸಿದರು.

# ಥೈರಾಯ್ಡ್ ಕಾಯಿಲೆಯನ್ನು ನಿರ್ಲಕ್ಷಿಸದಿರಿ :ಡಾ.ಕುಲ್ಲೊಳ್ಳಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಥೈರಾಯ್ಡ್ ಕಾಯಿಲೆಯನ್ನು ನಿರ್ಲಕ್ಷಿಸದೆ ಸಮಯಕ್ಕೆ ಸರಿಯಾಗಿ ಪರೀಕ್ಷೆ ಮಾಡಿಸಿಕೊಂಡು ಚಿಕಿತ್ಸೆ ಪಡೆಯುವ ಅಗತ್ಯವಿದೆ ಎಂದು ಬಿ.ಎಲ್.ಡಿ.ಇ ಆಸ್ಪತ್ರೆಯ ಶಸ್ತ್ರಚಿಕಿತ್ಸೆ ವಿಭಾಗದ ಪ್ರಾಧ್ಯಾಪಕ ಡಾ. ಗಿರೀಶ ಕುಲ್ಲೊಳ್ಳಿ ಹೇಳಿದ್ದಾರೆ.

ಶನಿವಾರ ನಗರದ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ಶ್ರೀ ಬಿ. ಎಂ. ಪಾಟೀಲ ವೈದ್ಯಕೀಯ ಮಹಾವಿದ್ಯಾಲಯದ ಶಸ್ತ್ರಚಿಕಿತ್ಸೆ ವಿಭಾಗದ ವತಿಯಿಂದ ವಿಜಯಪುರದ ಕೆ. ಸಿ. ಪಿ ವಿಜ್ಞಾನ ಪದವಿಪೂರ್ವ ಕಾಲೇಜಿನಲ್ಲಿ ಥೈರಾಯ್ಡ್ ಗ್ರಂಥಿ ರೋಗಗಳ ಜಾಗೃತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಥೈರಾಯ್ಡ್ ಮಾನವ ದೇಹದಲ್ಲಿನ ಅತಿದೊಡ್ಡ ನಿರ್ನಾಳ ಗ್ರಂಥಿಯಾಗಿದ್ದು, ಇಡೀ ದೇಹದ ಚಯಾಪಚಯ ಕ್ರಿಯೆ ಮತ್ತು ನಾನಾ ಶಾರೀರಿಕ ಕಾರ್ಯಗಳನ್ನು ನಿಯಂತ್ರಿಸುವ ಮಹತ್ವದ ಪಾತ್ರ ವಹಿಸುತ್ತದೆ.ಲ. ಥೈರಾಯ್ಡ್ ಗ್ರಂಥಿಯ ಕಾರ್ಯಕ್ಷಮತೆಯಲ್ಲಿ ಏರುಪೇರಾದಾಗ ಹೈಪೊ ಅಥವಾ ಹೈಪರ್ ಥೈರಾಯ್ಡಿಸಮ್ ಉಂಟಾಗಿ ಕುತ್ತಿಗೆಯ ಮುಂಭಾಗದಲ್ಲಿ ಗಂಟು ಕಾಣಿಸಿಕೊಳ್ಳಬಹುದು. ಈ ಸಮಸ್ಯೆ ಮಹಿಳೆಯರಲ್ಲಿ ಹೆಚ್ಚಾಗಿ ಕಂಡು ಬರುತ್ತದೆ. ಕೆಲವೊಮ್ಮೆ ಅನುವಂಶಿಕವಾಗಿಯೂ ಇದು ಬರಬಹುದು ಎಂದು ಅವರು ಹೇಳಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಸಹಾಯಕ ಪ್ರಾಧ್ಯಾಪಕಿ ಡಾ. ಶೃತಿ ಶೀಳೀನ, ಪ್ರತಿ ವರ್ಷ ಮೇ 25 ರಂದು ವಿಶ್ವ ಥೈರಾಯ್ಡ್ ದಿನವನ್ನು ಆಚ-ರಿಸಲಾಗುತ್ತದೆ. ಥೈರಾಯ್ಡ್ ಕಾಯಿಲೆಗಳ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು ಇದರ ಉದ್ದೇಶವಾಗಿದೆ. ಅಯೋಡಿನ್ ಕೊರತೆಯಿಂದ ಉಂಟಾಗುವ ಗಳಗಂಡ (ಗಾಯಿಟರ್) ರೋಗವನ್ನು ಅಯೋಡಿನ್ ಯುಕ್ತ ಉಪ್ಪಿನ ಬಳಕೆಯಿಂದ ತಡೆಯಬಹುದಾಗಿದೆ.

ಥೈರಾಯ್ಡ್ ಕಾಯಿಲೆಯ ಲಕ್ಷಣಗಳಳಾಗಿವೆ. ಥೈರಾಯ್ಡ್ ಕ್ಯಾನ್ಸರ್ ಚಿಕಿತ್ಸೆಗೆ ಉತ್ತಮವಾಗಿ ಸ್ಪಂದಿಸುವ ಕ್ಯಾನ್ಸರ್‌ಗಳಲ್ಲೊಂದಾಗಿದ್ದು, ಭಯಪಡದೆ ಎಚ್ಚರಿಕೆಯಿಂದ ಇರಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ ಕೆ.ಸಿ.ಪಿ. ವಿಜ್ಞಾನ ಪದವಿಪೂರ್ವ ಮಹಾವಿದ್ಯಾಲಯದ ಪ್ರಾಚಾರ್ಯ ಚನ್ನಮಲ್ಲಿಕಾರ್ಜುನ ಪಾಟೀಲ, ಉಪನ್ಯಾಸಕ ಸೂರ್ಯಕಾಂತ ಬಿರಾದಾರ, ಡಾ. ಮಂಜುನಾಥ ಸಾವಂತ, ಡಾ. ಸ್ನೇಹಲ ಪಾಟೀಲ, ಡಾ. ನಿಖಿಲ್ ಸೀತಿಮನಿ, ಸ್ನಾತಕೋತ್ತರ ವೈದ್ಯಕೀಯ ವಿದ್ಯಾರ್ಥಿಗಳಾದ ಡಾ. ಗಝಲ್, ಡಾ. ಲಿಖಿತ್ ಹಾಗೂ ಡಾ. ನಿನಾದ ಮುಂತಾದವರು ಉಪಸ್ಥಿತ-ರಿದ್ದರು. ಸುಮಾರು 200 ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿ ಥೈರಾಯ್ಡ್ ಕಾಯಿಲೆಗಳ ಕುರಿತು ಮಾಹಿತಿ ಪಡೆದರು.

# ಎಸಿಸಿ ತರಬೇತಿ ಮಾತ್ರ ಸಾಲದು, ಜೀವನದುದ್ದಕ್ಕೂ ಶಿಸ್ತು ಮತ್ತು ದೇಶಭಕ್ತಿ ಅಳವಡಿಸಿಕೊಳ್ಳಬೇಕು: ಸಿಯುಕೆ ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ



ಕಲಬುರಗಿ:ಯುವ ಸಮುದಾಯ ಕಡ್ಡಾಯವಾಗಿ ದೇಶಸೇವೆಯ ಮನೋಭಾವ ಬೆಳೆಸಿಕೊಳ್ಳಬೇಕು. ಪದವಿ ಕಾಲೇಜು ದಿನಗಳಲ್ಲಿ ಕೇವಲ ಓಅಅ (National Cadet Corps) ತರಬೇತಿ ಪಡೆಯುವುದಷ್ಟೆ ಸಾಕಾಗುವುದಿಲ್ಲ. NCC ಮೂಲಕ ಕಲಿತ ಶಿಸ್ತು, ದೇಶಸೇವೆ ಮತ್ತು ದೇಶಭಕ್ತಿಯನ್ನು ಜೀವನಪರ್ಯಂತ ಅಳವಡಿಸಿಕೊಂಡು ದೇಶ ಹಾಗೂ ಸಮಾಜದ ಅಭಿವೃದ್ಧಿಗೆ ಶ್ರಮಿಸುವುದು ಅತ್ಯಂತ ಮಹತ್ವದ್ದಾಗಿದೆ ಎಂದು ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಕುಲಪತಿಗಳು ಹಾಗೂ ಕಮಾಂಡಿಂಗ್ ಆಫೀಸರ್ ಪ್ರೊ. ಬಟ್ಟು ಸತ್ಯನಾರಾಯಣ ಹೇಳಿದರು.

ಅವರು ಇಂದು ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಬಹುಉಪಯೋಗಿ ಸಭಾಂಗಣದಲ್ಲಿ ಓಅಅ ವತಿಯಿಂದ ಮೇ 26ರಿಂದ ಜೂನ್ 1ರವರೆಗೆ ಆಯೋಜಿಸಿರುವ ಏಳು ದಿನಗಳ "ಯುವ ಆಪಾದ್ ಮಿತ್ರ" (Yuva Aapada Mitra -YAM) ಶಿಬಿರದ ಸಮಾರೋಪ ಕಾರ್ಯಕ್ರಮದಲ್ಲಿ ಅವರು ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದರು.

ದೇಶದ ರಕ್ಷಣಾ ಇಲಾಖೆಯ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ NCC, ವಿದ್ಯಾರ್ಥಿಗಳಿಗೆ ದೇಶಭಕ್ತಿ, ದೇಶಸೇವೆ ಹಾಗೂ ಶಿಸ್ತಿನ ಜೀವನಶೈಲಿಯ ಕು-ರಿತು ತರಬೇತಿ ನೀಡುತ್ತಿದೆ. ಜೊತೆಗೆ ಪ್ರಾಕೃತಿಕ ವಿಕೋಪಗಳು ಹಾಗೂ ತುರ್ತು ಪರಿಸ್ಥಿತಿಗಳ ಸಂದರ್ಭದಲ್ಲಿ ಯುವಜನರ ಸಕ್ರಿಯ ಪಾಲ್ಗೊಳ್ಳುವಿಕೆ ಅತ್ಯಗತ್ಯವಾಗಿದ್ದು, ಈ ನಿಟ್ಟಿನಲ್ಲಿ ಇಂತಹ YAM ತರಬೇತಿಗಳು ಬಹಳ ಉಪಯುಕ್ತವಾಗಿವೆ ಎಂದು ತಿಳಿಸಿದರು.

NCC ವಿದ್ಯಾರ್ಥಿಯಾಗುವುದು ಒಂದು ವಿಶೇಷ ಅವಕಾಶವಾಗಿದ್ದು, ಎಲ್ಲರಿಗೂ ಈ ಅವಕಾಶ ದೊರೆಯುವುದಿಲ್ಲ. ಆದ್ದರಿಂದ ವಿದ್ಯಾರ್ಥಿಗಳು ಈ ಅವಕಾಶವನ್ನು ಸದುಪಯೋಗಪಡಿಸಿಕೊಂಡು ನಮ್ಮಲ್ಲಿ ನಾಯಕತ್ವ ಗುಣ, ಸೇವಾ ಮನೋಭಾವ ಹಾಗೂ ಸಾಮಾಜಿಕ ಜವಾಬ್ದಾರಿಯನ್ನು ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು.

ಪ್ಲಾಸ್ಟಿಕ್ ಮುಕ್ತ ಸಮಾಜ ನಿರ್ಮಾಣ, ಪರಿಸರ ಸಂರಕ್ಷಣೆ, ಪ್ರಾಕೃತಿಕ ವಿಕೋಪಗಳ ಸಂದರ್ಭದಲ್ಲಿ ತಕ್ಷಣ ಸ್ಪಂದನೆ, ದೇಶಸೇವೆ ಹಾಗೂ ರಕ್ಷಣಾ ಕ್ಷೇತ್ರದಲ್ಲಿ ಸೇವೆ ಸಲ್ಲಿಸುವಂತಹ ಸಮಾಜಮುಖಿ ಕಾರ್ಯಗಳ ಬಗ್ಗೆ ಓಅಅ ವಿದ್ಯಾರ್ಥಿಗಳು ಇತರ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಬೇಕು ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಕಲಬುರಗಿಯ 32 ಕರ್ನಾಟಕ NCC ಬಟಾಲಿಯನ ಕರ್ನಲ್ ಕಸ್ತೂರಬಾ ದತ್ತಾಜಿ ಟೊಂಗೇ ಪಾಟೀಲ್, ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಆಯುಕ್ತ ಶ್ರೀ ಎಸ್.ಪಿ. ಸುಳ್ಳದ, ಸಿಯುಕೆಯ ದೈಹಿಕ ಶಿಕ್ಷಣ ವಿಭಾಗದ ನಿರ್ದೇಶಕ ಶ್ರೀ ಎಂ.ಎಸ್. ಪಾಸ್ವಡಿ, ಸಿಯುಕೆ ವಸತಿ ನಿಲಯಗಳ ಮುಖ್ಯ ವಾರ್ಡನ್ ಡಾ. ಬಸವರಾಜ ಎಂ.ಎಸ್, ಆಆಒಂ ಸಂಚಾಲಕ ಶ್ರೀ ಉಮೇಶ್, ಸಹ ಕಾರ್ಯದರ್ಶಿ ಶ್ರೀ ರಾಜಕುಮಾರ ಮರಾಠಿ, ಱಂಒ ಶಿಬಿರದ ಸಂಚಾಲಕ ಶ್ರೀ ಪ್ರಮೋದ್ ಚೌಗಲೆ, ಶ್ರೀ ರವಿ ಬರದ, ಡಾ. ಮಮತಾ ನಾಟೀಕರ ಸೇರಿದಂತೆ ಎನ್.ಸಿ.ಸಿ ಶಿಬಿರಾರ್ಥಿಗಳು ಉಪಸ್ಥಿತರಿದ್ದರು.

# ಹಾಲು ಉತ್ಪಾದಕರಿಗೆ ಪ್ರೋತ್ಸಾಹ, ಸರ್ಕಾರಿ ಸೌಲಭ್ಯಗಳು ದೊರೆಯಲಿ



ಕಲಬುರಗಿ: ಹಾಲಿಗೆ ನೀಡುತ್ತಿರುವ ಪ್ರೋತ್ಸಾಹಧನ ಹೆಚ್ಚಳಗೊಳಿಸುವುದು, ಹೈನೋದ್ಯಮಕ್ಕೆ ಹೆಚ್ಚಿನ ಪ್ರೋತ್ಸಾಹ ನೀಡುವುದು, ಸೂಕ್ತ ಫಲಾನುಭವಿಗೆ ಸಾಲ ಸೌಲಭ್ಯ, ಸಬ್ಸಿಡಿ, ಶೆಡ್ ನಿರ್ಮಾಣಕ್ಕೆ ಧನ ಸಹಾಯ, ಮೇವು ಕತ್ತರಿಸುವ ಹಾಗೂ ಹಾಲೂ ಕರೆಯುವ ಯಂತ್ರ ನೀಡುವುದು ಸೇರಿದಂತೆ ಇನ್ನಿತರ ಸರ್ಕಾರಿ ಸೌಲಭ್ಯಗಳು ದೊರೆಯಬೇಕು. ಆಗ ಮಾತ್ರ ಹೈನುಗಾರಿಕೆಯತ್ತ ಜನರ ಒಲವು ಹೆಚ್ಚಾಗುತ್ತದೆ ಎಂದು ಹಿರಿಯ ಹೈನೋದ್ಯಮಿ ಬಾಬುರಾವ ಪಾಟೀಲ ಹೇಳಿದರು.

ನಗರದ ಹೊರವಲಯದ ಉಪಳಾಂವನ ಪಾಟೀಲರ ಹೊಲದಲ್ಲಿನ ಹಾಲಿನ ಡೈರಿಯಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಏರ್ಪಡಿಸಿದ್ದ 'ವಿಶ್ವ ಹಾಲು ದಿನಾಚರಣೆ'ಯಲ್ಲಿ ಅವರು ಮಾತನಾಡಿದರು.

ಬಳಗದ ಅಧ್ಯಕ್ಷ ಹಾಗೂ ಅರ್ಥಶಾಸ್ತ್ರ ಉಪನ್ಯಾಸಕ ಎಚ್.ಬಿ.ಪಾಟೀಲ ಮಾತನಾಡಿ, ಹಾಲು ಅಮೃತಕ್ಕೆ ಸಮಾನ. ಎಲ್ಲಾ ಪೋಷಕಾಂಶಗಳುಳ್ಳ ಸಮತೋಲಿತ ಆಹಾರವಾಗಿದ್ದು, ಅದನ್ನು ವ್ಯರ್ಥ ಮಾಡಬಾರದು. ವಿಶ್ವದಲ್ಲಿ ಇಂದಿಗೂ ಕೂಡಾ ಅನೇಕ ಮಕ್ಕಳು ಹಾಲಿನ ಲಭ್ಯತೆಯಿಂದ ವಂಚಿತರಾಗಿ ಅಪೌಷ್ಟಿಕತೆಯನ್ನು ಎದು-ರಿಸುತ್ತಿದ್ದಾರೆ. ಕೃಷಿ ಜೊತೆಗೆ ಹೈನುಗಾರಿಕೆಗೆ ಆದ್ಯತೆಯನ್ನು ನೀಡಿ ಹಾಲಿನ ಉತ್ಪಾದಕತೆಯನ್ನು ವೃದ್ಧಿಗೊಳಿಸುವದರ ಜೊತೆಗೆ, ಅದನ್ನು ಉತ್ತಮವಾಗಿ ನಿರ್ವಹಣೆ ಮಾಡಿ ಶುದ್ಧ ಹಾಲು ಎಲ್ಲರಿಗೂ ದೊರೆಯುವಂತೆ ಮಾಡುವುದು ಇಂದಿನ ಅಗತ್ಯವಾಗಿದೆ. ಬಾಬುರಾವ ಪಾಟೀಲ ಕುಟುಂಬು ಕಳೆದ 40 ವರ್ಷಗಳಿಂದ ಹೈನುಗಾ-ರಿಕೆಯನ್ನು ಮಾಡಿಕೊಂಡು ಸ್ವಾವಲಂಬನೆ ಜೀವನ ಸಾಗಿಸುತ್ತಾ, ಮಾದರಿಯಾಗಿದ್ದಾರೆ. 25 ಎಮ್ಮೆಗಳು ಮತ್ತು 5 ಮುರ್ರಾ ತಳಿಯ ಆಕಳುಗಳೊಂದಿಗೆ ಅಧಿಕ ಪ್ರಮಾಣ ಹಾಲನ್ನು ಉತ್ಪಾದಿಸಿ, ಕ್ಷೀರಕ್ರಾಂತಿ ಮಾಡುತ್ತಿದ್ದಾರೆ ಎಂದು ನುಡಿದರು.

ಹೈನುಗಾರಿಕೆಯಲ್ಲಿ ಉತ್ತಮ ಸಾಧನೆ ಮಾಡಿದ ವಿಜಯಲಕ್ಷ್ಮೀ ಬಿ.ಪಾಟೀಲ ಅವರಿಗೆ ಸತ್ಕರಿಸಿ, ಗೌರವಿಸಲಾಯಿತು.

# 27 ವರ್ಷ ಕಳೆದರು ಗುರುಗಳಿಗೆ ಗೌರವಿಸುತ್ತಿರುವುದು ಶ್ಲಾಘನೀಯ : ವಿಶ್ವರಾಧ್ಯ ಶಿವಾಚಾರ್ಯರು



ಅಫಜಲಪುರ: 27 ವರ್ಷಗಳ ಗತಿಸಿದರು ತಮ್ಮನ್ನು ತಿದ್ದಿ, ತೀಡಿ ಜೀವನದ ಸರಿ ದಾರಿಯಲ್ಲಿ ಮುನ್ನಡೆಸಿದ ಗುರುಗಳನ್ನು ಸ್ಮರಿಸಿ ಗೌರವ ಸಲ್ಲಿಸುತ್ತಿರುವ ವಿದ್ಯಾರ್ಥಿಗಳ ಕಾರ್ಯ ನಿಜಕ್ಕೂ ಶ್ಲಾಘನೀಯ ಎಂದು ವಿಶ್ವರಾಧ್ಯ ಮಳೇಂದ್ರ ಶಿವಾಚಾರ್ಯರು ಹೇಳಿದರು.

ಅಫಜಲಪುರ ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಗುರು ಭವನದಲ್ಲಿ 1997-98ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಂದ ಆಯೋಜಿಸಿದ್ದ ಗುರುವಂದನೆ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದ ಅವರು ಜೀವನದಲ್ಲಿ ಯಶಸ್ಸು ಗಳಿಸಿದ ನಂತರ ತಮ್ಮ ಬೇರುಗಳನ್ನು, ಕಲಿತ ಶಾಲೆಯನ್ನು ಹಾಗೂ ಪಾಠ ಹೇಳಿಕೊಟ್ಟ ಗುರುಗಳನ್ನು ಸ್ಮರಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ. ವಿದ್ಯೆ ನೀಡಿದ ಗುರುಗಳನ್ನು ಮರೆಯದಿರುವುದು ಭಾರತೀಯ ಸಂಸ್ಕೃತಿಯ ಪ್ರತೀಕವಾಗಿದೆ ಎಂದ ಅವರು ತಮ್ಮ ಬದುಕಿಗೆ ದಾರಿ ತೋರಿದ ಗುರುಗಳ ಋಣ ತೀರಿಸಲು ವಿದ್ಯಾರ್ಥಿಗಳು ಒಂದೇ ವೇದಿಕೆಯಲ್ಲಿ ಸೇರಿರುವುದು ಅನುಕರಣೀಯ ಕಾರ್ಯವಾಗಿದೆ. ಇಂದಿನ ಸ್ವಾರ್ಥಮಯ ಯುಗದಲ್ಲಿ ಇಂತಹ ಕಾರ್ಯಕ್ರಮಗಳು ಯುವ ಪೀಳಿಗೆಗೆ ಉತ್ತಮ ಸಂದೇಶ ನೀಡುತ್ತವೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಶಿಕ್ಷಕರಾದ ಶಾಮಾಚಾರ್ಯ, ಗುರುಸಿದ್ದಯ್ಯ ಹಿರೇಮಠ, ಎನ್.ಜಿ. ದೇಗಾಂವ, ಸಿದ್ರಾಮಯ್ಯ ಮಠ, ಎಸ್.ಎಂ. ಕಾಮಗೊಂಡ, ಎಸ್. ಎಸ್. ದೇವೂರ, ಮುನೀರ ಪಟೇಲ, ಆರ್.ಜಿ. ದೇಸಾಯಿ, ಶೇಖಪ್ಪ ಜೋಗುರ, ಮಲ್ಲಿಕಾರ್ಜುನ ಸಿಂದಗಿ, ಮಹಾಂತಪ್ಪ ಬಟವಾಲ, ಜಾಲಾಲ ಭಾಸ್ಕರ್ ಕುಂಬಾರ ಹಾಗೂ ಹಣಮಂತ ಅವಟೆ ಅವರನ್ನು ವಿದ್ಯಾರ್ಥಿಗಳು ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ರಾಜಶೇಖರ ಜೋಗೂರ, ರಾಘವೇಂದ್ರ ಚಿನಿವಾರ, ಗುಂಡು ಅಂಬೂರೆ, ಸಿದ್ಧರಾಮ ರಾಣೆ, ಭೀಮಾಶಂಕರ ಪತ್ತಾರ, ಅನೀಲ ಸಿಂಪಿ, ಚಂದ್ರಕಾಂತ ಸಿಂಗೆ, ಶಿವಾನಂದ ಅವಟೆ, ಬೋಗಪ್ಪ ಆಸಂಗಿಹಾಳ, ಗಾಯತ್ರಿ ಮಹಾಮನಿ, ವಿದ್ಯಾ ನಾಟೀಕಾರ, ಅನುರಾಧಾ ಪೊಟೋಡೆ, ಪ್ರೀತಿ ಆಲಮೇಲಕರ, ಗೀತಾ ಬಯಾಸ, ಸುಶೀಲ ಅಗ್ನಿಹೋತ್ರಿ, ಗಂಗಾ ಪಾಟೀಲ ಸೇರಿದಂತೆ 1997-98ನೇ ಸಾಲಿನ ಹಳೆಯ ವಿದ್ಯಾರ್ಥಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು.

ಗುರು ಶಿಷ್ಯರ ಸಂಬಂಧ ಹೇಗಿರಬೇಕೆನ್ನುವುದನ್ನು ನಮ್ಮ ಪುರಾಣ ಕಥೆಗಳನ್ನು ನೋಡಿ ಕಲಿಯಬೇಕು, ಹಾಗೆ ನಮ್ಮ ಹಿಂದಿನ ಗುರುಕುಲ ಪದ್ಧತಿಯಲ್ಲಿ ಗುರು ಶೀಷ್ಯರ ಪವಿತ್ರ ಸಂಬಂಧ ಕುರಿತು ಕಾಣಬಹುದಾಗಿದೆ. ಸರ್ಕಾರಿ ಪ್ರೌಢ ಶಾಲೆಯಲ್ಲಿ ಓದಿರುವ 1997-98ನೇ ಸಾಲಿನ ವಿದ್ಯಾರ್ಥಿಗಳು ಇಂದು ತಮ್ಮ ಬದುಕಿನಲ್ಲಿ ಸಾಕಷ್ಟು ಸಾಧನೆ ಪ್ರಗತಿ ಸಾಧಿಸಿದರೂ ಕೂಡ ತಮಗೆ ಕಲಿಸಿದ ಶಿಕ್ಷಕರನ್ನು ಸ್ಮರಿಸಿ ಗೌರವಿಸುತ್ತಿರುವುದು ನೋಡಿದರೆ ಗುರು ಪರಂಪರೆಯ ಮಹತ್ವ ಎಂಥದ್ದು ಎನ್ನುವುದು ಗೊತ್ತಾಗುತ್ತದೆ ಎಂದರು.

# 1.40 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು

ಕಲಬುರಗಿ:ಅಪರಿಚಿತ ವ್ಯಕ್ತಿಯೊಬ್ಬ ಮನೆ ಬೀಗ ತೆರೆದು 1.40 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು ಮಾಡಿರುವ ಘಟನೆ ಇಲ್ಲಿನ ಮಹಾದೇವ ನಗರದಲ್ಲಿ ನಡೆದಿದೆ.

ಜಿಲ್ಲಾ ಗೃಹ ರಕ್ಷ ದಳ ಅಧಿಕಾರಿ ಚಂದ್ರಕಾಂತ ಹಾವನೂರ ಅವರ ಮನೆ ಬೀಗ ತೆರೆದು ಕಳ್ಳ ಅಲಮಾರಿಯಲ್ಲಿದ್ದ 1 ಲಕ್ಷ ರೂ.ಮೌಲ್ಯದ ಬಂಗಾರದ ಎರಡು ಸುತ್ತುಂಗುರ ಮತ್ತು 40 ಸಾವಿರ ರೂ.ಭಾಗ್ಯವಂತಿ ದೇವಿಯ ಹುಂಡಿಯ ಹಣ ಕಳವು ಮಾಡಿಕೊಂಡು ಹೋಗಿದ್ದಾನೆ. ಇವರು ಸ್ವಗ್ರಾಮ ಹಾವನೂರ ಗ್ರಾಮದ ಹಯ್ಯಾಳ್ ಸಿದ್ದೇಶ್ವರ ಜಾತ್ರೆ ನಿಮಿತ್ಯ ಮೊದಲನೇ ಅಂತಸ್ತಿನಲ್ಲಿರುವ ಮನೆಗೆ ಬೀಗ ಹಾಕಿಕೊಂಡು ಗ್ರೌಂಡ್ ಫ್ಲೋನಲ್ಲಿರುವ ಪತ್ರಿಕೆಯ ಕಾರ್ಯಾಲಯದಲ್ಲಿ ಮನೆಯ ಬೀಗ ಇಟ್ಟು ಬೀಗ ಹಾಕದೆ ಕೊಂಡಿ ಹಾಕಿಕೊಂಡು ಹಾವನೂರ ಗ್ರಾಮಕ್ಕೆ ಹೋಗಿದ್ದರು ಎಂದು ತಿಳಿದುಬಂದಿದೆ.

30 ರಿಂದ 35 ವರ್ಷದ ಅಪರಿಚಿತ ವ್ಯಕ್ತಿಯೊಬ್ಬ ಮನೆ ಕಳ್ಳತನ ಮಾಡಿರುವುದು ಮನೆಯ ಸಿಸಿಟಿವಿಯಲ್ಲಿ ಸೆರೆಯಾಗಿದೆ ಎಂದು ದೂರಿನಲ್ಲಿ ತಿಳಿಸಲಾಗಿದೆ. ಈ ಬಗ್ಗೆ ಚೌಕ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.



# ವಿಶ್ವ ತಂಬಾಕು ವಿರೋಧಿ ದಿನ ಆಚರಣೆ

ಕಲಬುರಗಿ:ನಗರದ ಹೀರಾಪೂರ ಬಡಾವಣೆಯಲ್ಲಿ ಧರ್ಮಸ್ಥಳ ಮಂಜುನಾಥ ಸಮಿತಿಯ ಕಮಲಾಪುರ ವ್ಯಾಪ್ತಿಯ ವಲಯದ ಹಿರಾಪುರ ಕಾರ್ಯಕ್ಷೇತ್ರದ ಸ್ವಸಹಾಯ ಸಂಘದ ಸದಸ್ಯರಿಗೆ, ಮೇ 31ರ ವಿಶ್ವ ತಂಬಾಕು ವಿರೋಧಿ ದಿನಾಚರಣೆಯ ಪ್ರಯುಕ್ತ ಮಾಹಿತಿ ಕಾರ್ಯಕ್ರಮ ಆಯೋಜನೆ ಮಾಡಲಾಯಿತು.

ಜಿಲ್ಲಾ ಜನಜಾಗೃತಿ ವೇದಿಕೆ ಸದಸ್ಯರಾದ ರವಿ ನೀಲೂರ ಅವರು ದೀಪ ಬೆಳಗಿಸುವುದರ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಪಾಲಕರು ತಮ್ಮ ಮಕ್ಕಳು ದುಶ್ಚಟ ದುರಭ್ಯಾಸಗಳಿಂದ ದೂರವಿರುವಂತೆ ನೋಡಿಕೊಳ್ಳಬೇಕು, ಮಕ್ಕಳನ್ನು ಸಮಾಜದಲ್ಲಿ ಉತ್ತಮ ನಾಗರಿಕರಾಗುವಂತೆ ಮಾಡುವುದರ ಮೂಲಕ ದುಶ್ಚಟ ಮುಕ್ತ ನಿರ್ಮಾಣ ಮಾಡಬೇಕು ಎಂದು ಮನವಿ ಮಾಡಿದರು.

ಎಡಿಎಂಸಿ ಅಧ್ಯಕ್ಷರಾದ ಜ್ಯೋತಿ ಅವರು ದುಶ್ಚಟ ಮುಕ್ತ ಸಮಾಜದ ಕುರಿತು ಸಂಘದ ಸದಸ್ಯರಿಗೆ ಮಾಹಿತಿ ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲೆಯ ಜನಜಾಗೃತಿ ವೇದಿಕೆ ಅಧ್ಯಕ್ಷರಾದ ಅನಿಲ್ ಕುಮಾರ್ ಡಾಂಗೆ ಅವರು ವಹಿಸಿಕೊಂಡಿದ್ದರು.ಈ ಸಂದರ್ಭದಲ್ಲಿ ಶಾಲೆಯ ಪ್ರಾಂಶುಪಾಲರಾದ ಚಂದ್ರಶೇಖರ್ ಡಾಂಗೆ , ತಾಲೂಕು ಕೃಷಿ ಮೇಲ್ವಿಚಾರಕರಾದ ಪ್ರಶಾಂತ, ವಲಯದ ಮೇಲ್ವಿಚಾರಕರು, ಸೇವಾ ಪ್ರತಿನಿಧಿಗಳು, ಸಂಘದ ಸದಸ್ಯರ ಉಪಸ್ಥಿತಿಯಲ್ಲಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ಮಕ್ಕಳ ಬೆಳವಣಿಗೆಯಲ್ಲಿ ಪಾಲಕರ ಪಾತ್ರ ಪ್ರಮುಖ

ಕಲಬುರಗಿ: ಮಕ್ಕಳನ್ನು ದೇಶದ ಅಮೂಲ್ಯ ಮಾನವ ಸಂಪನ್ಮೂಲವಾಗಿಸಿ, ಸಮಾಜದ ದೊಡ್ಡ ಆಸ್ತಿಯನ್ನಾಗಿಸುವಲ್ಲಿ ಪಾಲಕರ ಪಾತ್ರ ಪ್ರಮುಖವಾಗಿದೆ. ಮಕ್ಕಳು ತಮ್ಮ ಪಾಲಕ-ಪೋಷಕರ ಶ್ರಮ ಮರೆಯಬಾರದು. ಅವರಿಗೆ ಗೌರವಯುತವಾಗಿ ಕಾಣುವುದು ಅಗತ್ಯವಾಗಿದೆ. ಮಕ್ಕಳು ತಮ್ಮ ಪಾಲಕರನ್ನು ಎಂದಿಗೂ ಕೂಡಾ ವೃದ್ಧಾಶ್ರಮಕ್ಕೆ ನೂಕುವ ಪ್ರವೃತ್ತಿ ಬೆಳಿಸಿಕೊಳ್ಳಬೇಡಿ ಎಂದು ಚಿಂತಕ ಶಿವಯೋಗೆಪ್ಪಾ ಎಸ್.ಬಿರಾದಾರ ಅಭಿಮತಪಟ್ಟರು.

ನಗರದ ಆಳಂದ ರಸ್ತೆಯ ಸಂತೋಷ ಕಾಲನಿ ಕ್ರಾಸ್ ಸಮೀಪದ 'ರಿಪಬ್ಲಿಕ್ ಇಂಗ್ಲೀಷ್ ಅಕಾಡೆಮಿ'ಯಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಜರುಗಿದ 'ಜಾಗತಿಕ ಪಾಲಕರ ದಿನಾಚರಣೆ'ಯಲ್ಲಿ ಅವರು ಮಾತನಾಡಿದರು.

ಉಪನ್ಯಾಸಕ, ಸಾಮಾಜಿಕ ಚಿಂತಕ ಎಚ್.ಬಿ.ಪಾಟೀಲ ಮಾತನಾಡಿ, ತನಗಾಗಿ ಏನನ್ನು ಪ್ರಾರ್ಥಿಸದ ತಾಯಿ, ತನಗಾಗಿ ಏನನ್ನು ಮಾಡಿಕೊಳ್ಳದ ತಂದೆ, ತಮ್ಮ ಮಕ್ಕಳ ಉತ್ತಮ ಭವಿಷ್ಯಕ್ಕಾಗಿ ಹಗಲು-ರಾತ್ರಿಯೆನ್ನದೆ ಶ್ರಮಿಸುವ ಮುಗ್ದ ಜೀವಿಗಳು. ಮಗುವಿಗೆ ಶಿಕ್ಷಣ, ಸಂಸ್ಕಾರ, ಬುದ್ಧಿಯನ್ನು ನೀಡಿ, ವ್ಯಕ್ತಿಯನ್ನು ಶಕ್ತಿಯನ್ನಾಗಿಸುವಲ್ಲಿ, ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಶ್ರಮಿಸುತ್ತಾರೆ.

# ಪೆಟ್ರೋಲ್, ಡೀಸೆಲ್ ದರ ಏರಿಕೆ ಖಂಡಿಸಿ ಎಸ್‌ಯುಸಿಐ ಪ್ರತಿಭಟನೆ

ಕಲಬುರಗಿ:ಕೇಂದ್ರ ಬಿಜೆಪಿ ಸರ್ಕಾರ ಕಳೆದ 10-12ದಿನಗಳಲ್ಲಿ 5 ಬಾರಿ ಪೆಟ್ರೋಲ್ ಮತ್ತು ಡೀಸೆಲ್ ದರಗಳನ್ನು ಏರಿಕೆ ಮಾಡಿರುವ ಕ್ರಮವನ್ನು ಖಂಡಿಸಿ ಎಸ್‌ಯುಸಿಐ ಕಮ್ಯುನಿಸ್ಟ್ ಪಕ್ಷದ ಜಿಲ್ಲಾ ಸಮಿತಿಯು ಪ್ರತಿಭಟನೆ ನಡೆಸಿತು.

ನಗರದ ಎಸ್.ವಿ.ಪಿ ವೃತ್ತದ ಬಳಿ ಸೇರಿದ ಪ್ರತಿಭಟನಾಕಾರರು ಪೆಟ್ರೋಲ್, ಡೀಸೆಲ್, ಅಡುಗೆ ಅನಿಲ ಸೇರಿದಂತೆ ಇಂಧನ ದರ ಏರಿಕೆಯನ್ನು ವಾಪಸ್ ಪಡೆಯಲು ಆಗ್ರಹಿಸಿದರು.

ಪಶ್ಚಿಮ ಏಷ್ಯಾದ ಯುದ್ಧದ ಕಾರಣದಿಂದ ಕಚ್ಚಾತೈಲದ ಬೆಲೆ ಏರಿಕೆಯಾಗಿದೆ, ಈ ಏರಿಕೆಗೆ ತಕ್ಕಂತೆ ತೈಲ ಕಂಪನಿಗಳು ದರ ಪರಿಷ್ಕರಣೆ ಮಾಡಿವೆ ಎಂಬುದಾಗಿ ಕೇಂದ್ರ ಸರ್ಕಾರ ಸಮಾರ್ಥನೆ ನೀಡುತ್ತಿದೆ. ಆದರೆ ಯುದ್ಧ ಆರಂಭವಾಗಿದ್ದು ಫೆಬ್ರವರಿ 28ರಂದುಪಂಚರಾಜ್ಯಗಳ ಚುನಾವಣೆಯ ಫಲಿತಾಂಶ ಬರುವವರೆಗೆ ದರ ಏರಿಕೆಯನ್ನು ಕಂಪನಿಗಳೇ ತಡೆ ಹಿಡಿದವೇ ಎಂಬುದಕ್ಕೆ ಬಿಜೆಪಿಯೇ ಉತ್ತರಿಸಬೇಕು. ಸಾಲದೆಂಬಂತೆ ಅಡುಗೆ ಅನಿಲ, ಸಿಎಸ್‌ಜಿಗಳ ದರವನ್ನು ಕೂಡ ಏರಿಕೆ ಮಾಡಲಾಗಿದೆ. ಇದರಿಂದ ಜನಸಾಮಾನ್ಯರು, ಹೋಟೆಲ್ ಉದ್ಯಮಿಗಳು, ಅಟೋ ಚಾಲಕರು ಸೇರಿದಂತೆ ಎಲ್ಲರಿಗೂ ಹೊರೆಯಾಗಿದೆ. ಈಗ ಜಾಗತಿಕ ಮಾರುಕಟ್ಟೆಯ ದರದ ನೆಪ ನೀಡುವ ಕೇಂದ್ರ ಸರ್ಕಾರ, ಕೋವಿಡ್ ಮತ್ತು ನಂತರದ ಅವಧಿಯಲ್ಲಿ ಕಚ್ಚಾತೈಲದ ಬೆಲೆ ಕುಸಿತವಾದಾಗ, ಅಥವಾ ರಷ್ಯಾ ದೇಶದಿಂದ ರಿಯಾಯಿತಿ ದರದಲ್ಲಿ ಖರೀದಿ ಮಾಡಿದಾಗ ಅದರ ಪ್ರಯೋಜನವನ್ನು ದೇಶದ ಜನರಿಗೆ ಕೊಡಲಿಲ್ಲ ಏಕೆ? ಬದಲಿಗೆ ಕೇಂದ್ರದ ಅಬಕಾರಿ ಸುಂಕ ಏರಿಕೆ ಮಾಡಲಾಯಿತು. ಕಳೆದ 12 ವರ್ಷಗಳ ಬಿಜೆಪಿ ಆಳ್ವಿಕೆಯಲ್ಲಿ ಕೇಂದ್ರ ಸರ್ಕಾರವು ಪೆಟ್ರೋಲ್, ಡೀಸೆಲ್ ಮೇಲೆ ರೂ. 43 ಲಕ್ಷ ಕೋಟಿಯಷ್ಟು ತೆರಿಗೆಯನ್ನು ಜನರಿಂದ ಸುಲಿಗೆ ಮಾಡಿದೆ. ಪೆಟ್ರೋಲ್, ಡೀಸೆಲ್ ದರದಲ್ಲಿ ಸುಮಾರು ಅರ್ಧದಷ್ಟು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ತೆರಿಗೆಯೇ ಇದೆ. ತೈಲ ಕಂಪನಿಗಳ ಲಾಭ, ಡೀಲರಗಳ ಕಮಿಷನ್ ಬಿಟ್ಟು ಕೂಡ, ಗ್ರಾಹಕರು ಕೇಂದ್ರದ ತೆರಿಗೆ ರೂ. 20 ಮತ್ತು ರಾಜ್ಯದ ತೆರಿಗೆ ರೂ. 25ನ್ನು ಪಾವತಿಸುತ್ತಿದ್ದಾರೆ. ಬಿಜೆಪಿ ಮತ್ತು ಕಾಂಗ್ರೆಸ್ ಸರ್ಕಾರಗಳು ಪರಸ್ಪರ ದೂಷಿಸುತ್ತಾ ಜನರನ್ನು ಮೂರ್ಖರನ್ನಾಗಿ ಮಾಡುತ್ತಿವೆ. ಎಲ್ಲರಿಗೂ ತಿಳಿದಿರುವಂತೆ ಇಂಧನ ಬೆಲೆಗಳು ಹೆಚ್ಚಾದರೆ ಜನರ ಪ್ರಯಾಣ, ಸಾರಿಗೆ ವೆಚ್ಚ ಹೆಚ್ಚಳವಾಗಿ ಒಟ್ಟಾರೆ ಹಣದುಬ್ಬರಕ್ಕೆ ಕಾರಣವಾಗುತ್ತದೆ. ಜನರ ನೈಜ ಆದಾಯ ಕುಸಿಯುತ್ತಲೇ ಇದೆ, ಹೊಸ ಉದ್ಯೋಗಗಳು ಸೃಷ್ಟಿಯಾಗುತ್ತಿಲ್ಲ. ಜನ ಸಂಕಷ್ಟದಲ್ಲಿರುವ ಈ ಪರಿಸ್ಥಿತಿಯಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ತಮ್ಮ ತೆರಿಗೆಗಳನ್ನು ಕಡಿತ ಮಾಡಬೇಕು, ಪರ್ಯಾಯ ತೈಲ ಮೂಲಗಳನ್ನು ಹುಡುಕಬೇಕು, ತಮ್ಮ ಸ್ವಾರ್ಥಕ್ಕೆ ಯುದ್ಧ ಹೂಡದಂತೆ ಅಮೇರಿಕಾ -ಇಸ್ರೇಲ್ ಗಳ ಮೇಲೆ ಜಾಗತಿಕ ಒತ್ತಡ ತರಬೇಕು ಎಂದು ಆಗ್ರಹಿಸಿದರು.




ಈ ಪ್ರತಿಭಟನೆಯನ್ನು ಉದ್ದೇಶಿಸಿ ಎಸ್.ಯು.ಸಿ.ಐ ಕಮ್ಯುನಿಸ್ಟ್ ಪಕ್ಷದ ಕಲಬುರಗಿ ಜಿಲ್ಲಾ ಕಾರ್ಯದರ್ಶಿ ಆರ್. ಕೆ.ವೀರಭದ್ರಪ್ಪ, ಜಿಲ್ಲಾ ಸಮಿತಿಯ ಸದಸ್ಯೆ ವಿ.ನಾಗಮ್ಮಾಳ್ ಇನ್ನಿತರರು ಮಾತನಾಡಿದರು. ಪ್ರತಿಭಟನೆಯಲ್ಲಿ ಪಕ್ಷದ ರಾಜ್ಯ ಸಮಿತಿಯ ಸೆಕ್ರೆಟೇರಿಯೇಟ್ ಸದಸ್ಯರಾದ ಕಾಮ್ರೇಡ್ ಎಮ್. ಶಶಿಧರ್, ಜಿಲ್ಲಾ ಸಮಿತಿ ಸದಸ್ಯರಾದ ರಾಮಣ್ಣ ಇಬ್ರಾಹಿಂಪುರ, ಗಣಪತರಾವ ಮಾನೆ, ಎಸ್.ಎಮ್.ಶರ್ಮಾ, ಜಗನ್ನಾಥ ಎಸ್. ಎಚ್., ಮಹೇಶ ಎಸ್.ಬಿ, ರಾಘವೇಂದ್ರ ಎಮ್. ಜಿ, ರಾಧಾ, ವಿಶಾಲಾಕ್ಷಿ ಪಾಟೀಲ್, ಮಹಾದೇವಿ, ಈಶ್ವರ, ಗೌರಮ್ಮ, ರಮೇಶ ದೇವಕರ್, ದೇವರಾಜ, ಭೀಮು ಆಂದೋಲಾ ಹಾಗೂ ಪಕ್ಷದ ಸದಸ್ಯರು, ಬೆಂಬಲಿಗರು ಮೊದಲಾದವರು ಭಾಗವಹಿಸಿದ್ದರು.

# ಹಾಲು ಉತ್ಪಾದಕರಿಗೆ ಪ್ರೋತ್ಸಾಹ, ಸರ್ಕಾರಿ ಸೌಲಭ್ಯಗಳು ದೊರೆಯಲಿ

ಕಲಬುರಗಿ: ಹಾಲಿಗೆ ನೀಡುತ್ತಿರುವ ಪ್ರೋತ್ಸಾಹಧನ ಹೆಚ್ಚಳಗೊಳಿಸುವುದು, ಹೈನೋದ್ಯಮ್ಯಕ್ಕೆ ಹೆಚ್ಚಿನ ಪ್ರೋತ್ಸಾಹ ನೀಡುವುದು, ಸೂಕ್ತ ಫಲಾನುಭವಿಗೆ ಸಾಲ ಸೌಲಭ್ಯ, ಸಬ್ಸಿಡಿ, ಶೆಡ್ ನಿರ್ಮಾಣಕ್ಕೆ ಧನ ಸಹಾಯ, ಮೇವು ಕತ್ತರಿಸುವ ಹಾಗೂ ಹಾಲೂ ಕರೆಯುವ ಯಂತ್ರ ನೀಡುವುದು ಸೇರಿದಂತೆ ಇನ್ನಿತರ ಸರ್ಕಾರಿ ಸೌಲಭ್ಯಗಳು ದೊರೆಯಬೇಕು. ಆಗ ಮಾತ್ರ ಹೈನುಗಾ-ರಿಕೆಯತ್ತ ಜನರ ಒಲವು ಹೆಚ್ಚಾಗುತ್ತದೆ ಎಂದು ಹಿರಿಯ ಹೈನೋದ್ಯಮಿ ಬಾಬುರಾವ ಪಾಟೀಲ ಹೇಳಿದರು.

ನಗರದ ಹೊರವಲಯದ ಉಪಳಾಂವನ ಪಾಟೀಲರ ಹೊಲದಲ್ಲಿನ ಹಾಲಿನ ಡೈರಿಯಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಏರ್ಪಡಿಸಿದ್ದ 'ವಿಶ್ವ ಹಾಲು ದಿನಾಚರಣೆ'ಯಲ್ಲಿ ಅವರು ಮಾತನಾಡಿದರು.

ಬಳಗದ ಅಧ್ಯಕ್ಷ ಹಾಗೂ ಅರ್ಥಶಾಸ್ತ್ರ ಉಪನ್ಯಾಸಕ ಎಚ್.ಬಿ.ಪಾಟೀಲ ಮಾತನಾಡಿ, ಹಾಲು ಅಮೃತಕ್ಕೆ ಸಮಾನ. ಎಲ್ಲಾ ಪೋಷಕಾಂಶಗಳುಳ್ಳ ಸಮತೋಲಿತ ಆಹಾರವಾಗಿದ್ದು, ಅದನ್ನು ವ್ಯರ್ಥ ಮಾಡಬಾರದು. ವಿಶ್ವದಲ್ಲಿ ಇಂದಿಗೂ ಕೂಡಾ ಅನೇಕ ಮಕ್ಕಳು ಹಾಲಿನ ಲಭ್ಯತೆಯಿಂದ ವಂಚಿತರಾಗಿ ಅಪೌಷ್ಟಿಕತೆಯನ್ನು ಎದುರಿಸುತ್ತಿದ್ದಾರೆ. ಕೃಷಿ ಜೊತೆಗೆ ಹೈನುಗಾರಿಕೆಗೆ ಆದ್ಯತೆಯನ್ನು ನೀಡಿ ಹಾಲಿನ ಉತ್ಪಾದಕತೆಯನ್ನು ವೃದ್ಧಿಗೊಳಿಸುವದರ ಜೊತೆಗೆ, ಅದನ್ನು ಉತ್ತಮವಾಗಿ ನಿರ್ವಹಣೆ ಮಾಡಿ ಶುದ್ಧ ಹಾಲು ಎಲ್ಲರಿಗೂ ದೊರೆಯುವಂತೆ ಮಾಡುವುದು ಇಂದಿನ ಅಗತ್ಯವಾಗಿದೆ. ಬಾಬುರಾವ ಪಾಟೀಲ ಕುಟುಂಬು ಕಳೆದ 40 ವರ್ಷಗಳಿಂದ ಹೈನುಗಾ-ರಿಕೆಯನ್ನು ಮಾಡಿಕೊಂಡು ಸ್ವಾವಲಂಬನೆ ಜೀವನ ಸಾಗಿಸುತ್ತಾ, ಮಾದರಿಯಾಗಿದ್ದಾರೆ. 25 ಎಮ್ಮೆಗಳು ಮತ್ತು 5 ಮುರ್ರಾ ತಳಿಯ ಆಕಳುಗಳೊಂದಿಗೆ ಅಧಿಕ ಪ್ರಮಾಣ ಹಾಲನ್ನು ಉತ್ಪಾದಿಸಿ, ಕ್ಷೀರಕ್ರಾಂತಿ ಮಾಡುತ್ತಿದ್ದಾರೆ ಎಂದು ನುಡಿದರು.



ಹೈನುಗಾರಿಕೆಯಲ್ಲಿ ಉತ್ತಮ ಸಾಧನೆ ಮಾಡಿದ ವಿಜಯಲಕ್ಷ್ಮೀ ಬಿ.ಪಾಟೀಲ ಅವರಿಗೆ ಸತ್ಕರಿಸಿ, ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ನಿವೃತ್ತ ಕೃಷಿ ಅಧಿಕಾರಿ ಶಿವಯೋಗೆಪ್ಪಾ ಎಸ್.ಬಿರಾದಾರ, ಪ್ರಮುಖರಾದ ಸುಧಾಕರ, ಚನ್ನವೀರ, ಅನಸುಬಾಯಿ, ಶಿವಕುಮಾರ ಜಮಾದಾರ, ಭಾಗ್ಯಶ್ರೀ, ಮಲ್ಲಮ್ಮ, ಸವಿತಾ, ಲಕ್ಷ್ಮೀ ಸೇರಿದಂತೆ ಇನ್ನಿತರರಿದ್ದರು.

# ಉತ್ತಮ ಭವಿಷ್ಯಕ್ಕಾಗಿ ಸೈಕಲ್ ಸವಾರಿ ಮಾಡಿ

**ಇಂದು (ಜೂನ್ 3, ಬುಧವಾರ) 'ವಿಶ್ವ ಬೈಸಿಕಲ್ ಡೇ' ತನಿಮಿತ್ಯ ಈ ವಿಶೇಷ ಲೇಖನ**

■ **ಉದಯರಶ್ಮಿ ದಿನಪತ್ರಿಕೆ**

ಆಡಂ ಹಾರ್ಟ-ಡೇವಿಸ್ ಅವರು, "ಸೈಕಲ್ ಎಂದರೆ ಮನುಷ್ಯನ ಪಾರಂಪರಿಕ-ಸಾಂಪ್ರದಾಯಿಕ ಮತ್ತು ಅತ್ಯಂತ ಸುಲಭ ಮತ್ತು ಅಗ್ಗದ ಸಾರಿಗೆಯ ಸಾಧನ.

ಸೈಕಲ್ ತುಳಿಯುವುದರಿಂದ ನಿಮ್ಮ ದೇಹಕ್ಕೆ ಕಸರತ್ತು ಮತ್ತು ವ್ಯಾಯಾಮ ನೀಡುವ ಸವಾರಿಯಾಗಿದೆ" ಎಂದು ಹೇಳಿದ್ದಾರೆ. ಸೈಕಲ್ ಸವಾರಿ ಎಂದರೆ ಕೇವಲ ವ್ಯಾಯಾಮವಲ್ಲ. ಅದು ನಮ್ಮ ದೇಹ ಮತ್ತು ಮನಸ್ಸಿಗೆ ನವ ಚೈತನ್ಯವನ್ನು ನೀಡುವ ಒಂದು ಸಾಧನ. ನಾವು ಬಾಲ್ಯದಲ್ಲಿದ್ದಾಗ ಒಡನಾಡಿ ಇದ್ದಂತೆ. ಇದರಿಂದ ಪ್ರಕೃತಿಯ ಸೌಂದರ್ಯವನ್ನು ಸವಿಯಲು, ಆರೋಗ್ಯವನ್ನು ಕಾಪಾಡಲು ಮತ್ತು ಪರಿಸರವನ್ನು ಸಂರಕ್ಷಿಸಲು ಸಹಕಾರಿಯಾಗಿದೆ. ನಮ್ಮ ಪಾರಂಪರಿಕ-ಸಾಂಪ್ರದಾಯಿಕ ವಾಹನವಾದ ಈ ಸೈಕಲ್ ಅನ್ನು ಬಳಸಿ, ಮುಗಿದು ಹೋಗುತ್ತಿರುವ ಇಂಧನವನ್ನು ಉಳಿಸಿ. ನಾವು ಸಣ್ಣವರಿದ್ದಾಗ ಗೆಳೆಯರೊಂದಿಗೆ ಜೊತೆಗೂಡಿ ಸೈಕಲ್ ಸವಾರಿ ಮಾಡುತ್ತಾ ನಾ ಮುಂದು ತಾ ಮುಂದು ಎಂದು ಸ್ಪರ್ಧೆಗಿಳಿಯುತ್ತಿದ್ದ ಸಂದರ್ಭಗಳು ನೆನೆಪಿಗೆ ಬಂದರೆ ಮನಸ್ಸಿಗೆ ಆಹ್ಲಾದಕರವೆನಿಸುತ್ತದೆ. ಸೈಕಲ್ ಒಂದು ವ್ಯಕ್ತಿ ಚಾಲಿತ ವಾಹನವಾಗಿದ್ದು, ಮಾನವನಿಗೆ ದೈಹಿಕ ಕಸರತ್ತು ನೀಡಬಲ್ಲ ಸಾಧನ. ಯಾವುದೇ ದುಬಾರಿಯಲ್ಲದ, ನೈಸರ್ಗಿಕ ಪರಿಸರಕ್ಕೆ ಹಾನಿಯನ್ನುಂಟು ಮಾಡದಂತಹ ಪರಿಸರ ಸ್ನೇಹಿ ವಾಹನವಾಗಿದೆ. ಏನಪ್ಪ ಇವರು ಈ ಸೈಕಲ್ ಬಗ್ಗೆ ಇಷ್ಟೊಂದು ವರ್ಣನೆ ಮಾಡುತ್ತಿದ್ದೀರಿ ಅಂದುಕೊಂಡಿರಾ? ಎಂಬ ಬಗ್ಗೆ ಕುತೂಹಲ ನಿಮ್ಮ ಮನದಲ್ಲಿ ಮೂಡದೇ ಇರಲಾರದು.

ಜಾಗತಿಕ ಯುದ್ದದ ಸಂದರ್ಭದಲ್ಲಿ ಪೆಟ್ರೋಲ್, ಡಿಸೇಲ್ ಬೆಲೆಯು ಗಗನಕ್ಕೇರುತ್ತಿರುವ ಇಂದಿನ ದಿನಗಳಲ್ಲಿ ಪ್ರತಿ ಕುಟುಂಬದ ಆಶ್ರಯವಾಗಿದ್ದ ಸೈಕಲ್ ಬಳಕೆಯು ಮತ್ತೆ ಮುನ್ನಲೆಗೆ ಬರುತ್ತಿದೆ. ಯುನೈಟೆಡ್ ಸ್ಟೇಟ್ಸ್ ಆಫ್ ಅಮೇರಿಕಾದಲ್ಲಿ ಪ್ರಾಧ್ಯಾಪಕರಾಗಿ ಕಾರ್ಯನಿರ್ವಹಿಸುತ್ತಿದ್ದ ಪೋಲಿಶ್ ಸೋಷಿಯಲ್ ಸೈಂಟಿಸ್ಟ್ ಪ್ರೊ. ಲೆಸ್‌ಜೆಕ್ ಸಿಬಿಲ್ಸಿ ಅವರು ಮೊಟ್ಟಮೊದಲು ತಮ್ಮ ಸೋಷಿಯಾಲಾಜಿ ತರಗತಿ ವಿದ್ಯಾರ್ಥಿಗಳೊಂದಿಗೆ ಸೇರಿ ಈ ಪರಿಸರ ಸ್ನೇಹಿಯಾಗಿರುವ ಸೈಕಲ್‌ನ ಮಹತ್ವ ಮತ್ತು ವಿಶೇಷತೆಯನ್ನು ಅಮೇರಿಕಾ ದೇಶದ ಜನರಲ್ಲಿ ತಿಳಿಸಲಿ ಜಾಗೃತಿಯನ್ನೇ ಆರಂಭಿಸಿದರು.

**ದೈಹಿಕ ಕಸರತ್ತು ನೀಡುಚ ಮತ್ತು ಪರಿಸರ ಸ್ನೇಹಿ ಸೈಕಲ್**






2015 ರಲ್ಲಿ ಹಮ್ಮಿಕೊಂಡ ಸೈಕಲ್ ಅಭಿಯಾನಕ್ಕೆ ತುರ್ಕಮೇನಿಸ್ಥಾನ ಮತ್ತು ಇತರ 56 ರಾಷ್ಟ್ರಗಳಿಂದ ಸಕರಾತ್ಮಕ ಬೆಂಬಲ ದೊರೆತು ಮುಂದೆ ಜಗತ್ತಿನ ವಿವಿಧ ರಾಷ್ಟ್ರಗಳೆಡೆ ಜಾಗೃತಿ ಪಸರಿತು. ಮುಂದೆ ಏಪ್ರೀಲ್ 12, 2018 ರಂದು ಅಂತಿಮವಾಗಿ ವಿಶ್ವಸಂಸ್ಥೆಯು ವಿಶೇಷ ಗೊತ್ತುವಳಿಯನ್ನು ಪಾಸು ಮಾಡಿ ಪ್ರತಿವರ್ಷ ಜೂನ್ 3 ರಂದು ಜಗತ್ತಿನಾದ್ಯಂತ 'ವಿಶ್ವ ಸೈಕಲ್ ದಿನ ' ವನ್ನಾಗಿ ಆಚರಿಸುವಂತೆ ಕರೆ ಕೊಟ್ಟಿತು. ಇಂದು ಒಟ್ಟು 193 ರಾಷ್ಟಗಳು ಸೈಕಲ್ ದಿನಾಚರಣೆಯನ್ನು ಆಚರಿಸುತ್ತಿವೆ.

ಈ ದಿನದ ಆಚರಣೆಯ ಪ್ರಮುಖ ಉದ್ದೇಶವೆಂದರೆ ಸೈಕಲ್ ಎಂಬುದು ಎಲ್ಲ ವರ್ಗದವರ ಪಾಲಿಗೆ ಆಶಾಕಿರಣವಾಗಿದ್ದು, ಅಗ್ಗದ ದರದಲ್ಲಿ ಕೊಂಡು ತಮ್ಮ ಕೆಲಸ-ಕಾರ್ಯಗಳನ್ನು ನಿರ್ವಹಿಸಲು ಮತ್ತು ಮಾನವನ ದೈಹಿಕ ಕಸರತ್ತಿಗೆ ಅನುಕೂಲಕರ. ಅದರಲ್ಲೂ ವಿಶೇಷವಾಗಿ ಅತಿ ಅಮೂಲ್ಯವಾದ ಪರಿಸರಕ್ಕೆ ಹಾನಿ ಮಾಡದೇ ಪರಿಸರ ಸ್ಬೇಹಿ ಎಂಬುದನ್ನು ತಿಳಿಸುವುದಾಗಿದೆ.

**ನೋ ವೆಹಿಕಲ್ ಓನ್ಲಿ ಸೈಕಲ್ ಎಂಬ ಜಾಗೃತಿ ಮೂಡಲಿ**

ವಿಶ್ವದಾದ್ಯಂತ ಜೂನ್ 3 ರಂದು ಸೈಕಲ್ ದಿನಾಚರಣೆಯನ್ನು ಆಚರಿಸುವ ಮೂಲಕ 'ಸೈಕಲ್' ನ ಮಹತ್ವವನ್ನು ಸಾರುತ್ತಾ, ಬಡವ-ರಿಂದ ಹಿಡಿದು ಎಲ್ಲ ವರ್ಗದ ಜನರಿಗೆ ಸವಾರಿ ಮಾಡಬೇಕೆಂಬ ಬಯಕೆಯನ್ನು ಈಡೇರಿಸಬಲ್ಲ ಅಗ್ಗದ ಸವಾರಿ ಎಂದರೆ ಅದುವೇ ಸೈಕಲ್. ಅದರ ಜೊತೆಗೆ ಆಧುನಿಕತೆ ಮತ್ತು ವಿಜ್ಞಾನ-ತಂತ್ರಜ್ಞಾನ, ಕೈಗಾರಿಕೆಗಳ ಅಭಿವೃದ್ಧಿಯ ಹೆಸರಿನಲ್ಲಿ ಮತ್ತು ದಿನದಿಂದ ದಿನಕ್ಕೆ ಮಿತಿಮೀರುತ್ತಿರುವ ವಾಹನಗಳ ಬಳಕೆಯಿಂದ ಇಡೀ ಪರಿಸರವೇ ಕಲುಷಿತಗೊಳ್ಳುತ್ತಿದೆ. ಇದರಿಂದ ಪೆಟ್ರೋಲ್, ಡಿಸೆಲ್‌ನಂತಹ ನೈಸರ್ಗಿಕ ಸಂಪನ್ಮೂಲಗಳು ಖಾಲಿಯಾಗುತ್ತಿವೆ ಮತ್ತು ದುಬಾ-ರಿಯಾಗುತ್ತಿವೆ. ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿದ ವಿಶ್ವಸಂಸ್ಥೆಯು ವಿಶ್ವ ಸೈಕಲ್ ದಿನದ ಆಚರಿಸುವಂತೆ ಘೋಷಿಸಿತು.

ಈ ದಿನದ ಆಚರಣೆ ಇರುವ ಕಾರಣಗಳು ಅನೇಕ. ಜನರಿಗೆ ದೈಹಿಕ ವ್ಯಾಯಾಮದ ಜೊತೆಗೆ ರಸ್ತೆ ಸುರಕ್ಷತಾ ಕ್ರಮಗಳನ್ನು ಮತ್ತು ಸರಳ ಜೀವನದ ಬಗೆಗೆ ತಿಳಿಹೇಳುವುದು. ಶಾಲೆ-ಕಾಲೇಜುಗಳಲ್ಲಿ ಎನ್.ಎಸ್.ಎಸ್, ಇಕೋ ಕ್ಲಬ್ ಮತ್ತು ಪರಿಸರಾತ್ಮಕ ಜಾಗೃತಿ-ಅಭಿಯಾನ-ಜಾಥಾದಂತಹ ಸಾಮಾಜಿಕ ಚಟುವಟಿಕೆಗಳನ್ನು ಹಮ್ಮಿಕೊಂಡು ವಿದ್ಯಾರ್ಥಿ-ಸಾರ್ವಜನಿಕರಲ್ಲಿ ಸೈಕಲ್ ಬಳಕೆಯ ಕುರಿತು ಜಾಗೃತಿ ಮೂಡಿಸುವುದೇ ಆಗಿದೆ.

**ಆಧುನಿಕತೆಯಿಂದ ಬಡವರ ಆಶಾಕಿರಣವಾಗಿದ್ದ ಸೈಕಲ್ ಮಾಯ**

ಅದರಲ್ಲೂ ವಿಶೇಷವಾಗಿ ಕೋವಿಡ್-19 ನಂತಹ ಈ ಕಾಲಘಟ್ಟದಲ್ಲಿ ಒಬ್ಬಗೊಬ್ಬರು ಕೂಡಿ ಚಲಿಸದಂತೆ, ಸಾಮಾಜಿಕ ಅಂತರವನ್ನು ಕಾಪಾಡಿಕೊಳ್ಳಬೇಕಾಗಿರುವದರಿಂದ ಈ ಸೈಕಲ್ ಎಂಬ ವ್ಯಕ್ತಿ ಚಾಲಿತ ಚಲಿಸುವ ವಾಹನವು ಮಹತ್ವವನ್ನು ಪಡೆದುಕೊಂಡಿದೆ. ಇಂದು ಶೇಕಡಾ 12.4% ಜನರು ಸೈಕಲ್ ಬಳಸುತ್ತಿದ್ದಾರೆ. ಡೆನ್ಮಾರ್ಕ ದೇಶದಲ್ಲಿ ಪರಿಸರ ಸಂರಕ್ಷಣೆಗಾಗಿ ಪ್ರತಿ 10 ಜನರಲ್ಲಿ 9 ಜನರು ಸೈಕಲ್ ಬಳಸುತ್ತಿರುವದು ಕಂಡರೆ ಅಲ್ಲಿನ ಜನರ ಪರಿಸರಾತ್ಮಕ ಪ್ರಜ್ಞೆಯನ್ನು ಎತ್ತಿ ತೋರಿಸುತ್ತದೆ. ಜಗತ್ತಿನೆಲ್ಲೆಡೆ ಸರಿ ಸುಮಾರು ಆಧುನಿಕತೆ ಹೆಚ್ಚಿದಂತೆ ಸೈಕಲ್ ನಮ್ಮಿಂದ ಕಣ್ಮರೆಯಾಗುತ್ತಿವೆ. ಇನ್ನು ನಮ್ಮ ಹಳ್ಳಿಗಾಡಿನ ಜನರು ಜಾತ್ರೆಯಂತಹ ಸಂದರ್ಭಗಳಲ್ಲಿ ಸೈಕಲ್ ರೇಸ್ ಆಯೋಜಿಸಿ ಈ ಸೈಕಲ್ ನ ಬಳಕೆ ಬಗೆಗೆ ಜಾಗೃತಿ ಮೂಡಿಸುತ್ತಿರುವದು ಕೊಂಚ ಸಂತೋಷದ ವಿಷಯ. ಆದರೆ ದುರಾದೃಷ್ಟವೆಂದರೆ ಇಂದು ಜನರ ಆದಾಯ ಮತ್ತು ಜೀವನಮಟ್ಟ ಸುಧಾರಿಸಿದಂತೆ ಜನರ ಆಶೋತ್ತರಗಳು ಹೆಚ್ಚಾಗುತ್ತಾ ಸೈಕಲ್‌ನಿಂದ ಬೈಕ್, ಕಾರ್... ಹೀಗೆ ಅತ್ಯಾಧುನಿಕ ಯಂತ್ರಚಾಲಿತ ವಾಹನಗಳತ್ತ ಮುಖ ಮಾಡುತ್ತಿರುವುದು ಈ ಸೈಕಲ್ ಮಾಯವಾಗುತ್ತಿರುವದು ಕಳವಳಕಾರಿ ಸಂಗತಿಯಾಗಿದೆ.



**ಸೈಕಲ್ ಸವಾರಿಯಿಂದ ಪ್ರಯೋಜನಗಳು**

ಈ ಸೈಕಲ್ ಸವಾರಿ ಮಾಡುವುದರಿಂದ ವ್ಯಕ್ತಿಗೆ ದೈಹಿಕ ಕಸರತ್ತು ನೀಡುವ ಮತ್ತು ಹೃದಯ ಸಂಬಂಧಿ ರೋಗಗಳು ಬರದಂತೆ ತಡೆಯುವ ಮತ್ತು ಗುಣಪಡಿಸುವುದು. ಇಡೀ ಶರೀರದ ಅವಯವಗಳಿಗೆ ಅಗತ್ಯ ವ್ಯಾಯಾಮ ನೀಡಬಲ್ಲ ಏಕೈಕ ಸಾಧನವಾಗಿದ್ದು, ಮಾನಸಿಕ ಒತ್ತಡದಿಂದ ದೂರ ಮಾಡುತ್ತಾ ಮನುಷ್ಯನಿಗೆ ಉತ್ತಮ ಆರೋಗ್ಯವನ್ನು ನೀಡುತ್ತದೆ. ಮಕ್ಕಳು ದೂರದ ಸ್ಥಳದಲ್ಲಿರುವ ಶಾಲೆ-ಕಾಲೇಜುಗಳಿಗೆ ಹೋಗಲು ಉಪಯೋಗಿಸುವ ಸಾಧನವಾಗಿದೆ.



**ಕೊನೆಯ ನುಡಿ**

ಖ್ಯಾತ್ ಸೈಕ್ಲಿಷ್ಟ್ ಫಿಲ್ ಕಿಯೋಗ್ಯಾಮ್ ರವರ ಪ್ರಕಾರ, "ಸೈಕಲ್ ಸವಾರಿ ಮಾಡುವುದೇಂದರೆ ಅದು ನಮ್ಮ ಮೂಲ ಸಂಪ್ರದಾಯವನ್ನು ಉಳಿಸಿಕೊಂಡು ಹೋಗುವುದು. ಅದು ನಮ್ಮ ಪರಿಸರ ಸ್ನೇಹಿ ಮತ್ತು ಮಿತ ಖರ್ಚಿನ ಚಲಿಸುವ ಸಾಧನವಾಗಿದೆ ಎಂದು ಹೇಳಿದ್ದಾರೆ. ಸಾಮಾನ್ಯ ಜನೋಪಯೋಗಿ ಸಾಧನವಾಗಿರುವ ಈ ಸೈಕಲ್ ಇಂದಿನ ಕಾಲದಲ್ಲಿ ಮರುಬಳಕೆ ಮಾಡಬೇಕಾಗಿರುವ ಅಗತ್ಯತೆಯಿದ್ದು, ಪರಿಸರದಲ್ಲಿ ಸ್ವಚ್ಛತೆ, ಸ್ವಾಸ್ಥ್ಯ ಮತ್ತು ಉತ್ತಮ ಪರಿಸರದಂತಹ ವಾತಾವರಣವನ್ನು ನಿರ್ಮಿಸಬೇಕಾಗಿರುವುದು ಇಂದಿನ ಅಗತ್ಯತೆಗಳಲ್ಲೊಂದು. ಸಮತೋಲಿತ ಮತ್ತು ಸುಸ್ಥಿರವಾದ ಪರಿಸರವನ್ನು ಕಾಯ್ದುಕೊಳ್ಳಲು ಈ ಸೈಕಲ್ ಬಳಕೆಯು ಅತಿ ಮುಖ್ಯವಾಗಿದೆ. ಇದು ಒಂದು ಪರಿಸರ ಸ್ನೇಹಿಯಾಗಿರುವ ಸವಾ-ರಿಯಾಗಿದ್ದು, ಇದರಿಂದ ಯಾವುದೇ ಪ್ರಕೃತಿ-ಪರಿಸರ ಮತ್ತು ಇಡೀ ಮಾನವ ಸಂಕುಲಕ್ಕೆ ಹಾನಿಯಿಲ್ಲವೆಂಬುದು ವಿಶೇಷ. ಸೈಕಲ್ ನಮ್ಮ ಸಂಪ್ರದಾಯದ ಪ್ರತೀಕವಾಗಿದೆ. ಸೈಕಲ್ ಸವಾರಿ ಮಾಡಿ, ದುಬಾರಿ ಮತ್ತು ಬರಿದಾಗುವ ಸಂಪನ್ಮೂಲ ಇಂಧನವನ್ನು ಉಳಿಸುವ ಕಾರ್ಯಕ್ಕೆ ಕೈ ಜೋಡಿಸಿ..

ಲೇಖನ
■ ಮಲ್ಲಪ್ಪ. ಸಿ. ಖೊದ್ನಾಪೂರ
(ತಿಕೋಟಾ)
ವಿಜಯಪುರ



# ವಿದ್ಯಾರ್ಥಿಗಳಿಗೆ ಹೂ, ಪುಸ್ತಕ ನೀಡಿ ಬರಮಾಡಿಕೊಂಡ ಗುರುವೃಂದ



■ **ಉದಯರಶ್ಮಿ ದಿನಪತ್ರಿಕೆ**

ಜಮಖಂಡಿ: ಸರ್ಕಾರ ಮಕ್ಕಳಿಗೆ ಉಚಿತ ಶಿಕ್ಷಣ ನೀಡುವುದರೊಂದಿಗೆ ಮಧ್ಯಾಹ್ನದ ಬಿಸಿಯೂಟ, ಸಮವಸ್ತ್ರ, ಬೂಟ್, ಷೂ ಸೇರಿದಂತೆ ಪಠ್ಯಪುಸ್ತಕ ಉಚಿತವಾಗಿ ವಿತರಿಸುತ್ತಿದೆ. ಆದ್ದರಿಂದ ಪಾಲಕರು ಖಾಸಗಿ ಶಾಲೆಯ ವ್ಯಾಮೋಹಕ್ಕೆ ಒಳಗಾಗದೇ ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸಬೇಕು' ಎಂದು ಎಸ್ ಡಿ ಎಮ್ ಸಿ ಅಧ್ಯಕ್ಷ ಹಣಮಂತ ಶೆಟ್ಟೆನ್ನವರ ಮನವಿ ಮಾಡಿದರು.

ತಾಲೂಕಿನ ಸಾವಳಗಿ ಗ್ರಾಮದ ಸರ್ಕಾರಿ ಕನ್ನಡ ಕಿರಿಯ ಪ್ರಾಥಮಿಕ ಶಾಲೆ ಉಪ್ಪಾರ ತೋಟದಲ್ಲಿ ಮುಖ್ಯದ್ವಾರದ ಬಳಿ ಶಿಕ್ಷಕರು ವಿದ್ಯಾರ್ಥಿಗಳ ಮೇಲೆ ಹೂಗಳನ್ನು ಹಾಕುವುದರ ಮೂಲಕ ಮತ್ತು ಕೈಯಲ್ಲಿ ಗುಲಾಬಿ ಹೂ ನೀಡುವುದರ ಮೂಲಕ ಮುಗುಳ್ನಗೆಯಿಂದ ವಿದ್ಯಾರ್ಥಿಗಳನ್ನು ಶಾಲಾ ಆವರಣಕ್ಕೆ ಬರಮಾಡಿಕೊಂಡರು. ನಂತರ ಸರಸ್ವತಿ ದೇವಿಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕಗಳನ್ನು ವಿತರಿಸಿದರು. ವಿದ್ಯಾರ್ಥಿಗಳಿಗೆ ಸಿಹಿ ವಿತರಿಸಲಾಯಿತು.

ನಂತರ ಮುಖ್ಯೋಪಾಧ್ಯಾಯರಾದ ಕಾಶಿನಾಥ್ ಜಾಧವ ಮಾತನಾಡಿ, ನಿರಂತರ ಅಧ್ಯಯನ, ಪರಿಶ್ರಮದಿಂದ ಗುರಿ ತಲುಪಲು ಸಾಧ್ಯ. ಉನ್ನತ ಶಿಕ್ಷಣದ ಜೊತೆಗೆ ಉನ್ನತ ಹುದ್ದೆಯನ್ನು ಅಲಂಕರಿಸುವತ್ತ ಪ್ರತಿಯೊಬ್ಬರು ಶ್ರಮಿಸಬೇಕು ಎಂದರು.

ಇದೇ ಸಂದರ್ಭದಲ್ಲಿ ಕಾರ್ಯಕ್ರಮದಲ್ಲಿ ಹಿರಿಯರಾದ ಸದಾಶಿವ ಜಾಧವ, ಅರ್ಜುನ ಜಾಧವ, ಹಾಗೂ ಶಾಲೆಯ ಶಿಕ್ಷಕರು, ಸೇರಿದಂತೆ ಎಸ್.ಡಿ.ಎಮ್.ಸಿ ಸದಸ್ಯರು ಉಪಸ್ಥಿತರಿದ್ದರು.

# ಸುಳ್ಳು ಹೇಳುವುದು ಸಂಶೋಧನೆಯಲ್ಲ: ಡಾ. ಶಶಿಕಾಂತ ಪಟ್ಟಣ

■ **ಉದಯರಶ್ಮಿ ದಿನಪತ್ರಿಕೆ**



ಹಂಪಿ ವಿಶ್ವ ವಿದ್ಯಾಲಯದ ಪ್ರಾಧ್ಯಾಪಕ ಪ್ರೊ ವಾಸುದೇವ ಬಡಿಗೇರ ಅವರ ದೇವರ ದಾಸಿಮಯ್ಯನವರ ಮರು ಚಿಂತನೆ ವಿಷಯ ನಿಜಕ್ಕೂ ಅರ್ಥರಹಿತ ಪೂರ್ವಾಗ್ರಹಪೀಡಿತ ವಿಚಾರಗಳೇ ಹೊರತು ಅವರ ಯಾವ ವಿಚಾರಗಳು ಸತ್ಯದ ನಿಲುವಿಗೆ ನಿಲ್ಲುವುದಿಲ್ಲ.

ಇನ್ನು ಮೈಸೂರಿನ ಪ್ರೊ ವಸಂತಕುಮಾರ ಅವರು ಇದೆರಾಗದ ಪುನರಾವರ್ತನೆ ಮಾಡಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ದೇವರ ದಾಸಿಮಯ್ಯ ಮತ್ತು ಜೇಡರ ದಾಸಿಮಯ್ಯ ಇಬ್ಬರೂ ಒಬ್ಬರೇ ಎಂದು ಹಂಚಿಕೊಂಡಿದ್ದಾರೆ

ಓತಿಕ್ಯಾತಕ್ಕೆ ಬೇಲಿ ಸಾಕ್ಷಿ ಎನ್ನುವ ಹಾಗಿದೆ ಎಂದು ಪುಣೆ ಬಸವ ತಿಳುವಳಿಕೆ ಮತ್ತು ಸಂಶೋಧನಾ ಕೇಂದ್ರದ ಅಧ್ಯಕ್ಷ ಡಾ.ಶಶಿಕಾಂತ ಪಟ್ಟಣ (ರಾಮದುರ್ಗ) ಕಟುವಾಗಿ ಟೀಕಿಸಿದ್ದಾರೆ.

ಈ ಕುರಿತು ಮಂಗಳವಾರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ ಅವರು, ಡಾ ಎಚ್ ದೇವೀರಪ್ಪ, ಡಾ ತಿಪ್ಪೇರುದ್ರಸ್ವಾಮಿ, ಡಾ ಎಂ ಚಿದಾನಂದ ಮೂರ್ತಿ, ಡಾ ವೃಷಭೇಂದ್ರಸ್ವಾಮಿ, ಡಾ ಎಂ ಎಂ ಕಲಬುರ್ಗಿ, ಪ್ರೊ ವಿದ್ಯಾಶಂಕರ, ಡಾ ವೀರಣ್ಣ ರಾಜೂರ, ಡಾ ವೀರಣ್ಣ ದಂಡೆ, ಡಾ ಜಯಶ್ರೀ ದಂಡೆ, ಪ್ರೊ. ಬಿ ಆರ್ ಪೊಲೀಸ ಪಾಟಿಲ, ಪ್ರೊ ವಿ ಸಿ ಸವಡಿ ಸಿಂಡಿಕೇಟ್ ಸದಸ್ಯರು, ಪ್ರೊ ಹನುಮಾಕ್ಷಿ ಗೋಗಿ, ಡಾ ಕೆ ರವೀಂದ್ರನಾಥ, ಡಾ ಶಶಿಕಾಂತ ಪಟ್ಟಣ, ಡಾ ತಾರಾ ಬಿಎನ್, ಡಾ ವೀಣಾ ಯಲಿಗಾರ, ಪ್ರೊ ನಾಗರಾಜ ಕೊಟಗಾರ ಸೇರಿದಂತೆ ಅನೇಕ ಸಂಘ ಸಂಸ್ಥೆಗಳು

ದೇವರ ದಾಸಿಮಯ್ಯ ಮತ್ತು ಜೇಡರ ದಾಸಿಮಯ್ಯ ಇಬ್ಬರೂ ಬೇರೆ ಬೇರೆ ಅವರ ಕಾಲವೂ ಬೇರೆ ಎಂದು ನಿರೂಪಿಸಿವೆ. ಸತ್ಯವನ್ನು ಮರೆ ಮಾಚಿ ಸುಳ್ಳಿಗೆ ಪಟ್ಟ ಕಟ್ಟುವ ವಿಷಯ ಸಂಶೋಧನೆ ಆಗಲಾರದು.

ಇನ್ನು ಕಕ್ಕಯ್ಯ ಕುಂಬಾರ ಗುಂಡಯ್ಯ ಮಾದರ ಚೆನ್ನಯ್ಯ ಬಸವಣ್ಣನವರ ಸಮಕಾಲೀನ ಅಲ್ಲ ಅವರು ಬಸವಪೂರ್ವಯುಗದ ಶರಣರು ಎನ್ನುವ ಇನ್ನೊಂದು ಶುದ್ಧ ಸುಳ್ಳು ಹೇಳುತ್ತಾರೆ.

ಇದರ ವಿರುದ್ಧ ಬಸವ ತಿಳುವಳಿಕೆ ಮತ್ತು ಸಂಶೋಧನಾ ಕೇಂದ್ರ ಪುಣೆ ಪತ್ರ ಚಳುವಳಿ ಆರಂಭಿಸಿ ಇಂತಹ ಸುಳ್ಳು ವಿಚಾರಗಳನ್ನು ಸಂಶೋಧನೆ ಎಂದು ಹೇಳುವವರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಲು ಸರಕಾರವನ್ನು ಮತ್ತು ವಿಶ್ವ ವಿದ್ಯಾಲಯದ ಕುಲಪತಿಗಳನ್ನು ಡಾ.ಶಶಿಕಾಂತ ಪಟ್ಟಣ ಒತ್ತಾಯಿಸಿದ್ದಾರೆ.

# ಜೂ.6 ರಂದು ಅಪ್ರೆಂಟಿಸ್‌ಶಿಪ್‌ಗಾಗಿ ಕ್ಯಾಂಪಸ್ ಸಂದರ್ಶನ

■ **ಉದಯರಶ್ಮಿ ದಿನಪತ್ರಿಕೆ**

ವಿಜಯಪುರ: ನಗರದ ಬಿ.ಎಲ್.ಡಿ.ಇ ಕೈಗಾರಿಕೆ ತರಬೇತಿ ಸಂಸ್ಥೆ (ಐಟಿಐ) ಯಲ್ಲಿ ಜೂನ್ 6 ರಂದು ಶನಿವಾರ ಅಪ್ರೆಂಟಿಸ್‌ಶಿಪ್‌ಗಾಗಿ ಕ್ಯಾಂಪಸ್ ಸಂದರ್ಶನ ಆಯೋಜಿಸಲಾಗಿದೆ.

ಶನಿವಾರ ಬೆಳಿಗ್ಗೆ 9.30 ಗಂಟೆಗೆ ಟೋಯೋಟಾ ಇಂಡಸ್ಟ್ರೀಸ್ ಎಂಜಿನ್ ಇಂಡಿಯಾ ಪ್ರೈವೆಟ್ ಲಿಮಿಟೆಡ್ (ಟಿಐಇಐ) ಅವರು ಈ ಸಂದರ್ಶನ ನಡೆಸಲಿದ್ದು, ಐಟಿಐ ಪಾಸಾದ ಮತ್ತು ಐಟಿಐ ಅಂತಿಮ ವರ್ಷದ ಪರೀಕ್ಷೆಗೆ ಹಾಜರಾಗುತ್ತಿರುವ ವಿದ್ಯಾರ್ಥಿಗಳಿಗೆ ಇದರಲ್ಲಿ ಪಾಲ್ಗೊಳ್ಳಬಹುದಾಗಿದೆ

ವಿಜಯಪುರ ಜಿಲ್ಲೆಯಲ್ಲಿ ಬರುವ ಎಲ್ಲ ಐಟಿಐ ತರಬೇತಿದಾರರು ಎರಡು ಭಾವಚಿತ್ರ ಮತ್ತು ಅಗತ್ಯ ದಾಖಲಾತಿಗಳೊಂದಿಗೆ ಈ ಕ್ಯಾಂಪಸ್ ಸಂದರ್ಶನದಲ್ಲಿ ಭಾಗವಹಿಸಬಹುದು ಎಂದು ತರಬೇತಿ ಕೇಂದ್ರದ ಪ್ರಾಚಾರ್ಯ ಎಂ. ಡಿ. ಪಡಸಲಗಿ ಮಾಧ್ಯಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 9964658059 ಮತ್ತು 9916853605 ಸಂಪರ್ಕಿಸಬಹುದಾಗಿದೆ.

# ಶಾಸಕ ಅಶೋಕ ಮನಗೂಳಿ ಗೆ ಸಚಿವ ಸ್ಥಾನ ನೀಡಲು ಆಗ್ರಹ

■ **ಉದಯರಶ್ಮಿ ದಿನಪತ್ರಿಕೆ**



**ಕಾಂಗ್ರೆಸ್ ಪಕ್ಷದ ಯುವ ಮುಖಂಡ ಬಾಪೂಗೌಡ ಎಂ ಪಾಟೀಲ್ (ಕಣ್ಣಗುಡ್ಡಿಹಾಳ್) ಒತ್ತಾಯ**

ಸಿಂದಗಿ: ಮತಕ್ಷೇತ್ರದ ಶಾಸಕ ಅಶೋಕ ಮನಗೂಳಿ ಅವರಿಗೆ ಸಚಿವ ಸ್ಥಾನಮಾನ ನೀಡಬೇಕು ಎಂದು ಕಾಂಗ್ರೆಸ್ ಪಕ್ಷದ ಮುಖಂಡ ಬಾಪೂಗೌಡ ಎಂ ಪಾಟೀಲ್ (ಕಣ್ಣಗುಡ್ಡಿಹಾಳ್) ಆಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ ಅವರು, ಕಳೆದ 20 ವರ್ಷಗಳಿಂದ ಸಿಂದಗಿ ಮತಕ್ಷೇತ್ರದಲ್ಲಿ ಕಾಂಗ್ರೆಸ್ ತನ್ನ ಅಸ್ತಿತ್ವವನ್ನೇ ಕಳೆದುಕೊಂಡ ಇಲ್ಲಿ ಬಿಜೆಪಿ ಮತ್ತು ಜೆಡಿ-ಎಸ್ ಬಲಾಢ್ಯಾ ಸಾದಿಸಿ ಅಧಿಕಾರದಲ್ಲಿದ್ದವು. ಇಂತಹ ಬಿಜೆಪಿ ಬದ್ರ ಕೋಟೆ ಎಂದು 4 ಬಾರಿ ಆಡಳಿತ ಹೊಂದಿರುವ ಸಿಂದಗಿ ಮತಕ್ಷೇತ್ರದಲ್ಲಿ ಉಪಚುನಾವಣೆಯಲ್ಲಿ ಸುಮಾರು 63000 ಮತ ಪಡೆಯುವ ಮೂಲಕ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರನ್ನು ಕಟ್ಟಿಕೊಂಡರು. ಮುಂದೆ 2023 ಸಾರ್ವಜನಿಕ ಚುನಾವಣೆಯಲ್ಲಿ 8600 ಮತಗಳನ್ನ ಪಡೆಯುವ ಮೂಲಕ 31000 ಸಾವಿರ ಅಂತರದಲ್ಲಿ ಸೋತಿರುವ ಕಾಂಗ್ರೆಸ್ ಪಕ್ಷವನ್ನು ಇತಿಹಾಸ ಸೃಷ್ಟಿಸಿ ಸಿಂದಗಿಯಲ್ಲಿ ಕಾಂಗ್ರೆಸ್ ಪಕ್ಷದ ಬಾವುಟ ಹಾರಿಸಿದರು. ಅತ್ಯಂತ ಕಡಿಮೆ ಅವಧಿಯಲ್ಲಿ ಸಾಕಷ್ಟು ಅನುದಾನ ತಂದು ಸಿಂದಗಿಯನ್ನು ಮಾದರಿಯ ಮತಕ್ಷೇತ್ರವನ್ನಾಗಿ ಮಾಡಲು ಇನ್ನಷ್ಟು ಶಕ್ತಿಯ ಅವಶ್ಯಕತೆ ಇದೆ. ಆದ್ದರಿಂದ ಕಾಂಗ್ರೆಸ್ ಹೈ ಕಮಾಂಡ್ ಸಿಂದಗಿ ಜನಪ್ರಿಯ ಶಾಸಕರು ಆಗಿರುವ ಅಶೋಕ್ ಮನಗೂಳಿ ಅವರಿಗೆ ಸಚಿವ ಸ್ಥಾನಮಾನ ನೀಡಬೇಕು ಎಂದು ಇಡೀ ಸಿಂದಗಿ ಮತಕ್ಷೇತ್ರದ ಜನರು ಒತ್ತಾಯಿಸುತ್ತೇವೆ ಎಂದು ಬಾಪುಗೌಡ ಪ್ರಕಟಣೆಯಲ್ಲಿ ಕೋರಿದ್ದಾರೆ.

# ಬೈಕ್‌ನಿಂದ ಬಿದ್ದು ಸ್ಥಳದಲ್ಲಿಯೆ ಮಹಿಳೆ ಸಾವು!

## ಅವೈಜ್ಞಾನಿಕ ವೇಗ ನಿಯಂತ್ರಕದಿಂದ ಅಪಘಾತ । ಸಾರ್ವಜನಿಕರ ಆಕ್ರೋಶ

■ **ಉದಯರಶ್ಮಿ ದಿನಪತ್ರಿಕೆ**



ಚಡಚಣ: ವಿಜಯಪುರ ಜಿಲ್ಲೆಯ ಚಡಚಣ ತಾಲೂಕಿನ ಬರಡೋಲ ಗ್ರಾಮದ ಸಮೀಪ ಅವೈಜ್ಞಾನಿಕವಾಗಿ ನಿರ್ಮಿಸಲಾಗಿರುವ ರಸ್ತೆ ವೇಗ ನಿಯಂತ್ರಕ (ಹಂಪ್) ಕಾರಣದಿಂದ ಸಂಭವಿಸಿದ ಅಪಘಾತದಲ್ಲಿ ಮಹಿಳೆಯೊಬ್ಬರು ಮೃತಪಟ್ಟಿರುವ ಘಟನೆ ಸೋಮವಾರ ನಡೆದಿದೆ.

ಈ ಘಟನೆ ಸ್ಥಳೀಯರಲ್ಲಿ ತೀವ್ರ ಆಕ್ರೋಶಕ್ಕೆ ಕಾರಣವಾಗಿದ್ದು, ಸಂಬಂಧಿಸಿದ ಅಧಿಕಾರಿಗಳ ನಿರ್ಲಕ್ಷ್ಯದ ವಿರುದ್ಧ ಕ್ರಮ ಕೈಗೊಳ್ಳುವಂತೆ ಆಗ್ರಹಿಸಲಾಗಿದೆ.

ಮಹಾರಾಷ್ಟ್ರ ರಾಜ್ಯದ ಇಸ್ಲಾಂಪುರ ನಿವಾಸಿ ಮುಮ್ತಾಜ್ ಅಬ್ದುಲ್ ಶೇಖ್ (55) ಮೃತಪಟ್ಟ ಮಹಿಳೆ. ಅವರು ತಮ್ಮ ಪತಿ ಅಬ್ದುಲ್ ಶೇಖ್ ಅವರೊಂದಿಗೆ ಮೈನಳ್ಳಿ ಗ್ರಾಮದಿಂದ ಬೈಕ್‌ನಲ್ಲಿ ಇಸ್ಲಾಂಪುರಕ್ಕೆ ತೆರಳುತ್ತಿದ್ದ ವೇಳೆ ಬರಡೋಲ ಗ್ರಾಮದ ಬಳಿ ರಸ್ತೆ ಮಧ್ಯೆ ನಿರ್ಮಿಸಲಾಗಿದ್ದ ಅವೈಜ್ಞಾನಿಕ ವೇಗ ನಿಯಂತ್ರಕದಿಂದಾಗಿ ಬೈಕ್ ನಿಯಂತ್ರಣ ತಪ್ಪಿ ಕೆಳಗೆ ಬಿದ್ದಿದೆ. ಪರಿಣಾಮ ಮುಮ್ತಾಜ್ ಅವರ ತಲೆಗೆ ಪೆಟ್ಟು ಬಿದ್ದ ಪರಿಣಾಮವಾಗಿ ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಮೃತೆಯ ಪತಿ ಅಬ್ದುಲ್ ಶೇಖ್ ಮಾತನಾಡಿ, "ರಸ್ತೆಯ ಮೇಲಿನ ವೇಗ ನಿಯಂತ್ರಕಕ್ಕೆ ಯಾವುದೇ ಮುನ್ನೆಚ್ಚರಿಕೆ ಫಲಕ, ಬಣ್ಣದ ಗುರುತು ಅಥವಾ ಸೂಚನಾ ಫಲಕದ ವ್ಯವಸ್ಥೆ ಕೂಡ ಮಾಡಿಲ್ಲ. ಏಕಾಏಕಿ ಹಂಪ್ ಎದುರಾದ ಕಾರಣ ಬೈಕ್ ಸಮತೋಲನ ಕಳೆದುಕೊಂಡು ಅಪಘಾತ ಸಂಭವಿಸಿದೆ. ಈ ದುರಂತಕ್ಕೆ ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ಮತ್ತು ರಸ್ತೆ ಕಾಮಗಾರಿ ಮಾಡಿದ ಕಾಂಟ್ರ್ಯಾಕ್ಟರ ನೇರ ಹೊಣೆ" ಎಂದು ಆರೋಪಿಸಿದರು.

ಸ್ಥಳೀಯರ ಪ್ರಕಾರ, ಕೆಲವು ತಿಂಗಳ ಹಿಂದೆ ನಿರ್ಮಿಸಲಾದ ಈ ವೇಗ ನಿಯಂತ್ರಕ ಅವೈಜ್ಞಾನಿಕವಾಗಿದ್ದು, ಈಗಾಗಲೇ ಇದೇ ಸ್ಥಳದಲ್ಲಿ 15ಕ್ಕೂ ಹೆಚ್ಚು ಅಪಘಾತಗಳು ಸಂಭವಿಸಿವೆ. ಬರಡೋಲ ಗ್ರಾಮದ ಸುಮಾರು ಸ್ಥಳಗಳಲ್ಲಿ ದೊಡ್ಡ ದೊಡ್ಡ ರಸ್ತೆ ವೇಗ ನಿಯಂತ್ರಕ (ಹಂಪ್) ಅಳವಡಿಸಿದ್ದು ಅವನ್ನು ವೈಜ್ಞಾನಿಕವಾಗಿ ಅಳವಡಿಸುವಂತೆ ಅನೇಕ ಬಾರಿ ಅಧಿಕಾರಿಗಳ ಗಮನಕ್ಕೆ ತಂದರೂ ಸಮಸ್ಯೆ ಪರಿಹರಿಸಲು ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಸಾರ್ವಜನಿಕರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಅಪಘಾತದ ನಂತರ ಸ್ಥಳಕ್ಕೆ ಚಡಚಣ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು,ಮರಣೋತ್ತರ ಪರೀಕ್ಷೆಗೆ ಗಾಯಾಳುವನ್ನು ಸಮುದಾಯ ಆರೋಗ್ಯ ಕೇಂದ್ರ ಚಡಚಣಕ್ಕೆ ಸಾಗಿಸಲಾಯಿತು.

ರಸ್ತೆ ಸುರಕ್ಷತಾ ನಿಯಮಗಳನ್ನು ಪಾಲಿಸದೆ ನಿರ್ಮಿಸಿರುವ ವೇಗ ನಿಯಂತ್ರಕಗಳನ್ನು ತಕ್ಷಣ ತೆರವುಗೊಳಿಸಿ, ಮತ್ತು ಅವಶ್ಯಕತೆ ಇದ್ದಲ್ಲಿ ಮಾತ್ರ ವೈಜ್ಞಾನಿಕ ರೀತಿಯಲ್ಲಿ ರಸ್ತೆ ಸುರಕ್ಷತಾ (ಹಂಪ)ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸ್ಥಳೀಯರು ಒತ್ತಾಯಿಸಿದ್ದಾರೆ.

ಈ ಘಟನೆ ರಸ್ತೆ ಕಾಮಗಾರಿಗಳಲ್ಲಿನ ನಿರ್ಲಕ್ಷ್ಯ ಹಾಗೂ ಅವೈಜ್ಞಾನಿಕ ನಿರ್ಮಾಣಗಳು ಸಾರ್ವಜನಿಕರ ಜೀವಕ್ಕೆ ಹೇಗೆ ಅಪಾಯವಾಗುತ್ತವೆ ಎಂಬುದಕ್ಕೆ ಮತ್ತೊಂದು ಉದಾಹರಣೆಯಾಗಿದೆ. ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಕ್ರಮ ಕೈಗೊಂಡು ಇಂತಹ ದುರ್ಘಟನೆಗಳು ಮರುಕಳಿಸದಂತೆ ನೋಡಿಕೊಳ್ಳಬೇಕೆಂದು ಸಾರ್ವಜನಿಕರು ಆಗ್ರಹಿಸಿದ್ದಾರೆ

ಈ ಕುರಿತು ಚಡಚಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

# ಅಕ್ರಮ ಮಣ್ಣು ಸಾಗಣೆ ಖಂಡಿಸಿ ರೈತರಿಂದ ಪ್ರತಿಭಟನೆ

■ **ಉದಯರಶ್ಮಿ ದಿನಪತ್ರಿಕೆ**



ಕೊಲ್ಹಾರ: ಸಮೀಪದ ಕೃಷ್ಣಾ ನದಿಯಿಂದ ಅಕ್ರಮವಾಗಿ ಮಣ್ಣು ಸಾಗಣೆ ನಡೆಯುತ್ತಿರುವುದನ್ನು ಖಂಡಿಸಿ ರೈತರು ಮಂಗಳವಾರ ಪ್ರತಿಭಟನೆ ನಡೆಸಿದರು.

ರಾಷ್ಟ್ರೀಯ ಹೆದ್ದಾರಿ 218ರ ಕೊಲ್ಹಾರ ಸೇತುವೆ ಪಕ್ಕದ ತೋಟದ ರಸ್ತೆಯಲ್ಲಿ ಸಂಚರಿಸುತ್ತಿದ್ದ ಡಂಪರ್ ವಾಹನಗಳನ್ನು ತಡೆದು ತಮ್ಮ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನಾ ಸ್ಥಳದಲ್ಲಿ ರೈತರು ಡಂಪರ್‌ಗಳನ್ನು ನಿಲ್ಲಿಸಿ, ಅಕ್ರಮ ಮಣ್ಣು ಸಾಗಣೆಗೆ ತಕ್ಷಣ ಕಡಿವಾಣ ಹಾಕುವಂತೆ ಆಗ್ರಹಿಸಿದರು.

ಡಂಪರ್‌ಗಳಲ್ಲಿ ನಿಯಮ ಮೀರಿ ಮಣ್ಣು ತುಂಬಿ ಸಾಗಿಸಲಾಗುತ್ತಿದ್ದು, ವಾಹನ ಸಂಚಾರದಿಂದ ಏಳುವ ಭಾರೀ ಧೂಳು ಬೆಳೆಗಳ ಮೇಲೆ ಕುಳಿತು ಬೆಳೆ ಹಾನಿಯಾಗುತ್ತಿದೆ ಎಂದು ರೈತರು ಆರೋಪಿಸಿದರು.

ರೈತರಾದ ಮಲ್ಲಪ್ಪ ಗಾಣಿಗೇರ ಮತ್ತು ಲಕ್ಷ್ಮಣ್ ಅಂಬಿಗೇರ ಮಾತನಾಡಿ, "ನದಿಯಲ್ಲಿ ನೀರು ಇಳಿಮುಖವಾಗುತ್ತಿದ್ದಂತೆಯೇ ಮಣ್ಣು ಮಾಫಿಯಾ ಚಟುವಟಿಕೆಗಳು ಹೆಚ್ಚಾಗುತ್ತಿವೆ. ಈ ಬಗ್ಗೆ ಸಂಬಂಧಪಟ್ಟ ಇಲಾಖೆಗಳ ಗಮನಕ್ಕೆ ತಂದರೂ ಯಾವುದೇ ಕ್ರಮ ಕೈಗೊಳ್ಳಲಾಗಿಲ್ಲ. "ಪೊಲೀಸ್ ದೂರು ನೀಡಿ" ಎಂದು ಹೇಳಿ ಅಧಿಕಾರಿಗಳು ಸಮಸ್ಯೆಯನ್ನು ಕಂಡೂ ಕಾಣದಂತೆ ವರ್ತಿಸುತ್ತಿದ್ದಾರೆ, ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ ಎಂದು ರೈತರು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಡಂಪರ್‌ಗಳ ಅತಿಯಾದ ಓಡಾಟದಿಂದ ರಸ್ತೆ ಸಂಪೂರ್ಣ ಹಾಳಾಗಿದ್ದು, ಧೂಳಿನ ಮಬ್ಬಿನಿಂದ ವಾಹನ ಸವಾರರಿಗೆ ರಸ್ತೆ ಕಾಣದ ಅಪಾಯಕಾರಿ ಪರಿಸ್ಥಿತಿ ನಿರ್ಮಾಣವಾಗಿದೆ. ಬೆಳಿಗ್ಗೆ 5ರಿಂದ ರಾತ್ರಿ 10ರವರೆಗೆ ನಿರಂತರ ವಾಹನ ಸಂಚಾರದಿಂದ ವಾಯು ಮಾಲಿನ್ಯ ಹೆಚ್ಚಾಗಿ ಸಾರ್ವಜನಿಕರು, ರೈತರು ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ಹೇಳಿದರು.

ತಕ್ಷಣ ಕ್ರಮ ಕೈಗೊಳ್ಳದಿದ್ದರೆ ರಾಷ್ಟ್ರೀಯ ಹೆದ್ದಾರಿ ತಡೆದು ಉಗ್ರ ಹೋರಾಟ ಕೈಗೊಳ್ಳಲಾಗುವುದು ಎಂದು ರೈತರು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ನಾಗಪ್ಪ ಏಳಗಂಟಿ, ಮಲ್ಲಯ್ಯ ಮಠಪತಿ, ಸುರೇಶ್ ಉಪ್ಪಾರ, ಬಸವರಾಜ್ ಗಾಣಿಗೇರ್, ಪರಮಾನಂದ ಬರಗಿ ಸೇರಿದಂತೆ ಅನೇಕ ರೈತರು ಭಾಗವಹಿಸಿದ್ದರು.

# ತಾನು ಕರಗಿ ಬೆಳಕಾಗುವ ಮೇಣದ ಹಾಗೆ ಬದುಕಿ: ಎನ್.ಎಂ. ಬಿರಾದಾರ

## ವಿಜಯಪುರದ ಎಕ್ಸಲಂಟ್ ವಿಜ್ಞಾನ ಪ ಪೂ ಕಾಲೇಜಿನಲ್ಲಿ ಅದ್ದೂರಿಯಾಗಿ ನಡೆದ ಸ್ವಾಗತ ಸಮಾರಂಭ

■ **ಉದಯರಶ್ಮಿ ದಿನಪತ್ರಿಕೆ**



ವಿಜಯಪುರ: ಐಸ್‌ಕ್ರೀಮ್ ಹಾಗೂ ಮೇಣದ ಬತ್ತಿಗೆ ಕರಗುವ ಗುಣವಿದೆ. ಆದರೆ ಕರಗುವಿಕೆಯ ಹಿಂದಿರುವ ಉದ್ದೇಶ ವಿಭಿನ್ನವಾಗಿರುತ್ತದೆ. ಐಸ್‌ಕ್ರೀಮ್ ಸಮಯ ಇರುವ ಮೊದಲೆ ನನ್ನನ್ನು ತಿಂದು ತೃಪ್ತನಾಗು ಎಂದು ಹೇಳಿದರೆ ಮೇಣದ ಬತ್ತಿ ನಾನು ಕರಗುವ ಮೊದಲೇ ಈ ಜಗತ್ತಿಗೆ ಒಂದಷ್ಟು ಬೆಳಕನ್ನು ಕೊಡುತ್ತೇನೆ ಎನ್ನುವ ಸಾರ್ಥಕತೆ ತೋರುತ್ತದೆ. ನಮ್ಮ ಬದುಕು ಸಹ ಮೇಣದ ಬತ್ತಿಯಂತೆ ಬೇರೊಬ್ಬರಿಗೆ ಬೆಳಕು ನೀಡುವಂತಾಗಬೇಕು. ಎಂದು ಚಾಣಕ್ಯ ಕರಿಯರ್ ಅಕಾಡೆಮಿಯ ಸಂಸ್ಥಾಪಕ ಎನ್ ಎಂ ಬಿರಾದಾರ ಹೇಳಿದರು.

ಎಕ್ಸಲಂಟ್ ವಿಜ್ಞಾನ ಪದವಿ ಪೂರ್ವ ಕಾಲೇಜಿನಲ್ಲಿ ಆಯೋಜಿಸಲಾಗಿದ್ದ ಪ್ರಥಮ ಪಿಯುಸಿ ವಿದ್ಯಾರ್ಥಿಗಳ ಸ್ವಾಗತ ಹಾಗೂ 2026-27ನೇ ಸಾಲಿನ ಶೈಕ್ಷಣಿಕ ಚಟುವಟಿಕೆಗಳ ಪ್ರಾರಂಭೋತ್ಸವವನ್ನು ಉದ್ಘಾಟಿಸಿ ಮಾತನಾಡಿದ ಅವರು; ವಿದ್ಯೆ ಎನ್ನುವುದು ತಪಸ್ಸಿದ್ದಂತೆ, ಸಂತ ಮಹಾಂತ ಋಷಿಮುನಿಗಳು ಏಕಾಗ್ರತೆಯಿಂದ ತಪಸ್ಸು ಮಾಡಿ ಆತ್ಮ ಸಾಕ್ಷಾತ್ಕಾರ ಮಾಡಿಕೊಂಡಂತೆ ವಿದ್ಯಾರ್ಥಿಗಳು ಸಹ ವಿದ್ಯೆ ಎನ್ನುವ ತಪಸ್ಸನ್ನು ಏಕಾಗ್ರತೆಯಿಂದ ಮಾಡಿದಲ್ಲಿ ಸಾಧನೆ ಎನ್ನುವ ಸಾಕ್ಷತ್ಕಾರವನ್ನು ಹೊಂದಬಹುದು ಎಂದು ಹೇಳಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದ ವಾಗ್ಮಿ ಅಶೋಕ ಹಂಚಲಿ; ಒಬ್ಬ ಪೇಪರ್ ಹಾಕುವ ಹುಡುಗ ಈ ದೇಶಕ್ಕೆ ರಾಷ್ಟ್ರಪತಿಯಾಗುತ್ತಾನೆ ಎಂದ ಮೇಲೆ ನಮಗೇನಾಗಿದೆ ಎನ್ನುವ ಪ್ರಶ್ನೆಯನ್ನು ನಾವೇ ಮಾಡಿಕೊಳ್ಳಬೇಕು. ಕಾದ ಹಂಚಿನ ಮೇಲೆ ಬಿದ್ದ ನೀರಿನ ಹನಿಯೂ ಸಹ ಮುತ್ತಂತೆ ಭಾಸವಾಗುತ್ತದೆ. ಮುಂಜಾನೆ ಬಿದ್ದ ಮಂಜಿನ ಹನಿ ಬಿಸಿಲೇರಿದಂತೆ ಮುತ್ತಂತೆ ಹೊಳೆದು ಮಾಯವಾಗುತ್ತದೆ. ಆದರೆ ಸ್ವಾತಿ ಮಳೆಯ ಹನಿ ಕಪ್ಪೆಚಿಪ್ಪಿನಲ್ಲಿ ಬಿದ್ದಾಗ ಮಾತ್ರ ಅದು ಮುತ್ತಾಗಿ ಪರಿವರ್ತನೆಯಾಗುತ್ತದೆ ಅದು ಶಾಶ್ವತ ಮೌಲ್ಯ ಪಡೆಯುತ್ತದೆ. ಹಾಗೆಯೇ ಈ ವಿದ್ಯಾರ್ಥಿಗಳು ಸಹ ಇಂದು ಎಕ್ಸಲಂಟ್ ಎನ್ನುವ ಕಪ್ಪೆ ಚಿಪ್ಪಿನಲ್ಲಿ ಬಿದ್ದಾಗಿದೆ. ಇನ್ನು ಮುತ್ತಾಗುವುದು ಮಾತ್ರ ಬಾಕಿ ಇದೆ ಎಂದು ಹೇಳಿದರು.

ಸಾನಿಧ್ಯ ವಹಿಸಿದ ಬಸವನ ಬಾಗೇವಾಡಿ ಹಿರೇಮಠದ ಶಿವಪ್ರಕಾಶ ಶಿವಾಚಾರ್ಯರು ಮಾತನಾಡಿದರು.

ಎಕ್ಸಲಂಟ್ ಸಮೂಹ ಶಿಕ್ಷಣ ಸಂಸ್ಥೆಗಳ ಸಂಸ್ಥಾಪಕ ಚೇರಮನ್ ಬಸವರಾಜ್ ಕೌಲಗಿ, ಗೌರವ ನಿರ್ದೇಶಕ ರಾಜಶೇಖರ ಕೌಲಗಿ ಮಾತನಾಡಿದರು.

ಇದೇ ಸಂದರ್ಭದಲ್ಲಿ ಶಾಲಾಶಿಕ್ಷಣ ಇಲಾಖೆಯ ನೂತನ ಉಪನಿರ್ದೇಶಕರಾಗಿ ಜವಾಬ್ದಾರಿ ವಹಿಸಿಕೊಂಡ ಕೆ. ಎ. ಉಪ್ಪಾರ, ನಿಕಟಪೂರ್ವ ಉಪ ನಿರ್ದೇಶಕ ಡಾ. ಸಿ. ಕೆ. ಹೊಸಮನಿ, ನಿವೃತ್ತ ಪ್ರಾಂಶುಪಾಲ ಬಸವರಾಜ್ ಉಮರ್ಜಿ ಅವರನ್ನು ಸನ್ಮಾನಿಸಲಾಯಿತು.

ಕೂಡಿಗಿ ಸರ್ಕಾರಿ ಪ.ಪೂ ಕಾಲೇಜಿನ ಪ್ರಾಂಶುಪಾಲ ಕೆ.ಜಿ.ಲವಾಣಿ, ಎಕ್ಸಲಂಟ್ ವಿಜ್ಞಾನ ಪ.ಪೂ ಕಾಲೇಜಿನ ಪ್ರಾಂಶುಪಾಲ ಮಂಜುನಾಥ ಮ. ಜುನಗೊಂಡ, ಶೈಕ್ಷಣಿಕ ಸಂಯೋಜಕ ಮಂಜುನಾಥ ತುಮ್ಮರಮಟ್ಟಿ ಸೇರಿದಂತೆ ಎಲ್ಲ ಉಪನ್ಯಾಸಕ ವರ್ಗ ಹಾಜರಿದ್ದರು.

ಕು.ಚಿನ್ಮಯಿ ಪ್ರಾರ್ಥಿಸಿದರು. ಕನ್ನಡ ವಿಭಾಗದ ಮುಖ್ಯಸ್ಥ ಶರಣಗೌಡ ಪಾಟೀಲ್ ಸ್ವಾಗತಿಸಿದರು. ಆಂಗ್ಲ ಉಪನ್ಯಾಸಕ ಮುಸ್ತಾಕ ಮಲಘಾಣ ನಿರೂಪಿಸಿದರು.

# ತಾಪಂ ಇಒ ಆಗಿ ಆನಂದಕುಮಾರ ಅಧಿಕಾರ ಸ್ವೀಕಾರ

■ **ಉದಯರಶ್ಮಿ ದಿನಪತ್ರಿಕೆ**



ತಿಕೋಟಾ: ತಾಲೂಕು ಪಂಚಾಯತಿಯ ನೂತನ ಕಾರ್ಯನಿರ್ವಾಹಕ ಅಧಿಕಾರಿಗಳಾಗಿ ಆನಂದಕುಮಾರ ಮ್ಯಾಗೇರಿ ಅವರು ಅಧಿಕಾರ ಸ್ವೀಕಾರ ಮಾಡಿದರು.

ನಿರ್ಗಮಿತ ಕಾರ್ಯನಿರ್ವಾಹಕ ಅಧಿಕಾರಿಗಳಾದ ಬಸವಂತರಾಯಗೌಡ ಬಿರಾದಾರ ಅವರು ನೂತನವಾಗಿ ಆಗಮಿಸಿದ ಆನಂದಕುಮಾರ ಮ್ಯಗೇರಿ ಅವರಿಗೆ ಅಧಿಕಾರ ಹಸ್ತಾಂತರ ಮಾಡಿ, ಶುಭ ಕೋರಿದರು.

ನಂತರ ಇಬ್ಬರು ಅಧಿಕಾರಿಗಳಿಗೆ ಮಹಾತ್ಮ ಗಾಂಧಿ ನರೇಗಾ ನೌಕರರ ಸಂಘದಿಂದ ಗೌರವಿಸಿ, ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಸಹಾಯಕ ನಿರ್ದೇಶಕರಾದ ಬಸವರಾಜ ಸಂಕಗೊಂಡ, ಟಿಪಿಓ ಮಹಾಂತೇಶ ಬಾಗೇವಾಡಿ, ಮಹಾತ್ಮ ಗಾಂಧಿ ನರೇಗಾ ನೌಕರರ ಸಂಘದ ಜಿಲ್ಲಾ ಉಪಾಧ್ಯಕ್ಷರಾದ ಕಲ್ಲಪ್ಪ ನಂದರಗಿ, ತಾಂತ್ರೀಕ ಸಂಯೋಜಕ ನಾಗರಾಜ ಕಲಕೇರಿ, ತಾಲೂಕು ಎಮ್.ಐ.ಎಸ್ ಸಂಯೋಜಕರಾದ ಅಪರ್ಣಾ ಬದಾಮಿ, ಆಡಳಿತ ಸಹಾಯಕ ಸುನೀಲ ಬನಸೋಡೆ, ಎನ್.ಆರ್.ಎಲ್.ಎಮ್ ಯೋಜನೆಯ ವಲಯ ಮೇಲ್ವಿಚಾರಕರಾದ ಶ್ರೀಮಂತ ಕಟ್ಟಿ ಸೇರಿದಂತೆ ಇತರರು ಹಾಜರಿದ್ದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR